ಸಂಪುಟ : 11 ಸಂಚಿಕೆ: 18 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 18 Pages : 4+2 Price : 3.00 Saturday February 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ಕಸಾಯಿಖಾನೆ-ಮಾಂಸ ಮಾರಾಟ ನಿಷೇಧ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿರುವ ಎಲ್ಲಾ ಕಸಾಯಿಖಾನೆಗಳಲ್ಲಿ ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟವನ್ನು ಮಹಾಶಿವರಾತ್ರಿ ಅಂಗವಾಗಿ ಫೆಬ್ರವರಿ 15 ರಂದು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಾಶಿವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ಸಾರ್ವಜನಿಕರ ಭಾವನೆಗಳನ್ನು ಮನನ ಮಾಡಿ ಈ ಆದೇಶ ಜಾರಿಗೊಳಿಸಲಾಗಿದ್ದು, ಆ ದಿನ ಯಾವುದೇ ರೀತಿಯ ಜಾನುವಾರುಗಳ ವಧೆ ನಡೆಸಬಾರದು ಹಾಗೂ ಮಾಂಸ ಮಾರಾಟ ಮಾಡಬಾರದು ಎಂದು ಸಂಬಂಧಿತ ವ್ಯಾಪಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಈ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಹಾಗೂ ಸಂಬಂಧಿತ ಲೈಸನ್ಸ್ ರದ್ದುಪಡಿಸಲಾಗುವುದು ಎಂದು ಪೌರಾಯುಕ್ತರು ಎಚ್ಚರಿಕೆ ನೀಡಿದ್ದಾರೆ.

## ಫೆ.19ರಂದು ಶಿವಾಜಿ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಫೆಬ್ರವರಿ 19ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಗುತ್ತದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಡಾ. ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರು ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಉಪಸ್ಥಿತರಿರುವರು. ಹಿರಿಯ ವಕೀಲ ಸುಧೀರಸಿಂಹ ರಾ. ಘೋರ್ಪಡೆ ಅವರು ಉಪನ್ಯಾಸ ನೀಡಲಿದ್ದು, ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವ್ಹಿ. ಬಳ್ಳಾರಿ ಅವರು ಸಾರ್ವಜನಿಕರನ್ನು ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನಿಸಿದ್ದಾರೆ.

### ಸಾಧನಾ ಸಮಾವೇಶದಲ್ಲಿ 1,06,000 ಹಕ್ಕುಪತ್ರಗಳ ವಿತರಣೆ: ಕಂದಾಯ ಸಚಿವ ಕೃಷ್ಣ ಬೈರೇಗೌಡ

# ಸಾವಿರ ದಿನಗಳ ಸಾರ್ಥಕ ಸೇವೆಯ ಸಮರ್ಪಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರವು ಬಡಜನರ ಹಾಗೂ ಸಾಮಾನ್ಯ ಜನರ ಶ್ರೇಯೋಭಿವೃದ್ಧಿಗಾಗಿ ಹಲವಾರು ಕಾರ್ಯಕ್ರಮಗಳನ್ನು ಕೈಗೆತ್ತಿಕೊಂಡಿದೆ. ಸಾವಿರ ದಿನಗಳ ಸಾರ್ಥಕ ಸೇವೆಯನ್ನು ಜನರಿಗೆ ಸಮರ್ಪಿಸುವುದೇ ರಾಜ್ಯ ಸರ್ಕಾರದ ಉದ್ದೇಶವಾಗಿದೆ ಎಂದು ರಾಜ್ಯದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಶುಕ್ರವಾರದಂದು ಜರುಗಿದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಜನಸಾಮಾನ್ಯರ ಕೆಲಸ, ಬಡವರ ಕೆಲಸಗಳನ್ನು ಜನಸೇವೆಯೇ ಜನಾರ್ಧನನ ಸೇವೆ ಎಂದು ತಿಳಿದುಕೊಂಡು ಕಂದಾಯ ಇಲಾಖೆಯ ಅಧಿಕಾರಿಗಳೇ ಮನೆ ಮನೆ ಬಾಗಿಲಿಗೆ ಹೋಗಿ ಕೆಲಸ ಮಾಡುತ್ತಿದ್ದಾರೆ. ಮನೆಗಳಿಗೆ ಹಕ್ಕುಪತ್ರ ಇಲ್ಲದೇ ಬದುಕು ಅತಂತ್ರದಿಂದ ಕೂಡಿದ ಜನರಿಗೆ ಶಾಶ್ವತ ಪರಿಹಾರ ಕೊಡಲು ರಾಜ್ಯ ಸರ್ಕಾರ ಸಮರೋಪಾದಿಯಲ್ಲಿ ಕೆಲಸ ಮಾಡಿದೆ. 6500 ಕಂದಾಯ ಗ್ರಾಮಗಳ ಘೋಷಣೆಯು ಗುರಿಯು ಹೊಂದಿದ್ದು, 2,20,000 ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸುವ ಕೆಲಸವನ್ನು ರಾಜ್ಯ ಸರ್ಕಾರ ಮಾಡುತ್ತಿದೆ.

ಬಡಜನರಿಗೆ ಭೂ ಗ್ಯಾರಂಟಿ ಕೊಡುವ ಕೆಲಸ ಸರ್ಕಾರ ಮಾಡುತ್ತಿದೆ. ಶನಿವಾರ ಹಾವೇರಿಯಲ್ಲಿ ಜರುಗುವ ಸಾಧನಾ ಸಮಾವೇಶದಲ್ಲಿ 1,06,000 ಹಕ್ಕುಪತ್ರಗಳನ್ನು ಸಮರ್ಪಣೆ ಮಾಡಲಾಗುತ್ತಿದೆ. ಕಂದಾಯ ಇಲಾಖೆಯಲ್ಲಿ ಇದೊಂದು ವೇದಿಕೆಯಾಗಿದೆ ಎಂದು ಕಂದಾಯ ಇಲಾಖೆಯ ಸಚಿವ ಕೃಷ್ಣ ಭೈರೇಗೌಡ ಅವರು ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸ ಮೂರ್ತಿ ಸೇರಿದಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಬೈರತಿ ಬಂಧನದಲ್ಲಿ ರಾಜಕೀಯವಿಲ್ಲ

ಇದೇ ಸಂದರ್ಭದಲ್ಲಿ ಸಚಿವ ಕೃಷ್ಣ ಬೈರೇಗೌಡ ಶಾಸಕ ಬೈರತಿ ಬಸವರಾಜ್ ಬಂಧನ ವಿಚಾರವಾಗಿ ಪ್ರತಿಕ್ರಿಯಿಸಿ, ಈ ಪ್ರಕರಣದಲ್ಲಿ ಯಾವುದೇ ರಾಜಕೀಯ ಅಂಶ ಇಲ್ಲ ಎಂದು ಸ್ಪಷ್ಟಪಡಿಸಿದರು. ಬೈರತಿ ಅವರ ಮೇಲೆ ಕಾನೂನು ಪ್ರಕಾರ ಕ್ರಮ ಆಗಲಿ. ಕಾನೂನು ರೀತಿಯಲ್ಲಿಯೇ ಎಲ್ಲವೂ ನಡೆಯಲಿ. ಅದರಲ್ಲಿ ನಾವು ರಾಜಕೀಯ ಬೆರೆಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಮುಖ್ಯಮಂತ್ರಿ ಬದಲಾವಣೆ ಕುರಿತ ಚರ್ಚೆಗೆ ಪ್ರತಿಕ್ರಿಯೆ ನೀಡಿದ ಸಚಿವರು, ಯಾವ ಕಾಲಕ್ಕೆ ಏನಾಗಬೇಕೋ ಅದೇ ಆಗುತ್ತದೆ. ಇಂತಹ ಚರ್ಚೆಗಳಿಂದ ಸಾರ್ವಜನಿಕರ ಹಿತ ಕಾಯುವ ಕೆಲಸ ಆಗುವುದಿಲ್ಲ. ಕಾಲವೇ ಎಲ್ಲ ಪ್ರಶ್ನೆಗಳಿಗೆ ಉತ್ತರ ಕೊಡುತ್ತದೆ ಎಂದು ಹೇಳಿದರಲ್ಲದೆ, ನನಗೆ ಕೇಳಿದರೆ ನಾಲ್ಕು ಗೋಡೆಗಳ ಮಧ್ಯೆ ಹೇಳ್ತೀನಿ ಎಂದು ಹೇಳುವ ಮೂಲಕ ಈ ವಿಚಾರದಲ್ಲಿ ಹೆಚ್ಚಿನ ಪ್ರತಿಕ್ರಿಯೆ ನೀಡಲು ಅವರು ನಿರಾಕರಿಸಿದರು.

### ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಂಗನಗೌಡ ಪಾಟೀಲ

# ಗ್ಯಾರಂಟಿ ಯೋಜನೆಗಳಿಂದ ಫಲಾನುಭವಿಗಳು ವಂಚಿತರಾಗಬಾರದು




■ ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ಯಾವ ಫಲಾನುಭವಿಗಳೂ ವಂಚಿತರಾಗಬಾರದು, ಎಲ್ಲದಕ್ಕೂ ತಾಂತ್ರಿಕ ನೆಪಗಳನ್ನು ಹೇಳಬಾರದು ಎಂದು ರೋಣ ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಸೂಚಿಸಿದರು.

ಅವರು ಶುಕ್ರವಾರ ತಾ.ಪಂ ಸಭಾಭವನದಲ್ಲಿ ಜರುಗಿದ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಿಂದ ಎರಡು ತಾಲೂಕಿನಲ್ಲಿ ಸಾವಿರಾರು ಕುಟುಂಬಗಳಿಗೆ ಆರ್ಥಿಕ ಶಕ್ತಿ ಸಿಕ್ಕಂತಾಗಿದ್ದು, ಇದರಿಂದ ಮಹಿಳೆಯರು ಹೆಚ್ಚಿನ ಸ್ವ-ಉದ್ಯೋಗದಲ್ಲಿ ತೊಡಗಿಕೊಂಡಿದ್ದಾರೆ. ಅಲ್ಲದೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವಲ್ಲಿ ಮುಂದಾಗುತ್ತಿದ್ದಾರೆ. ಹೀಗಾಗಿ ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಬೇಕು ಎಂದ ಅವರು, ಅಧಿಕಾರಿಗಳು ಮತ್ತಷ್ಟು ಪರಿಣಾಮಕಾರಿಯಾಗಿ ತಮ್ಮ ಕೆಲಸ ನಿರ್ವಹಿಸಬೇಕು ಎಂದರು.

ಶಕ್ತಿ ಯೋಜನೆಯಿಂದ ಇಂದು ಸಾರಿಗೆ ಸಂಸ್ಥೆ ಲಾಭದತ್ತ ಸಾಗುತ್ತಿದೆ. ಮಹಿಳೆಯರಿಗೆ ಉಚಿತ ಪ್ರಯಾಣ ಇರುವದರಿಂದ ವ್ಯಾಪಾರ-ವಹಿವಾಟುಗಳು ಸಹ ಲಾಭದತ್ತ ಮುಖ ಮಾಡಿವೆ.

ಶಾಲಾ-ಕಾಲೇಜಿನ ವಿದ್ಯಾರ್ಥಿನಿಯರಿಗೆ ಉನ್ನತ ಶಿಕ್ಷಣ ಪಡೆಯಲು ಶಕ್ತಿ ಯೋಜನೆಯು ಅತ್ಯಂತ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದೆ. ಬಡ ವಿದ್ಯಾರ್ಥಿನಿಯರು ದೂರದ ಪಟ್ಟಣಗಳಿಗೆ ತೆರಳಿ ಗುಣಮಟ್ಟದ ಶಿಕ್ಷಣ ಪಡೆಯಲು ಶಕ್ತಿ ಯೋಜನೆ ಮತ್ತಷ್ಟು ಶಕ್ತಿ ನೀಡಿದ್ದು, ಸಾರಿಗೆ ಇಲಾಖೆಯ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಗಜೇಂದ್ರಗಡ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ ಮಾತನಾಡಿ, ರಾಜ್ಯ ಸರಕಾರ ಜಾರಿಗೆ ತಂದಿರುವ ಮಹತ್ವದ ಐದು ಗ್ಯಾರಂಟಿ ಯೋಜನೆಗಳಿಂದ ಅನೇಕ ಕುಟುಂಬಗಳು ಬಡತನ ರೇಖೆಯಿಂದ ಹೊರಬಂದಿರುವುದನ್ನು ಸಮೀಕ್ಷೆಗಳು ಹೇಳುತ್ತಿವೆ. ಮಹಿಳೆಯರು ಸ್ವಾವಲಂಬಿ ಜೀವನ ನಿರ್ವಹಿಸಲು ಗ್ಯಾರಂಟಿ ಯೋಜನೆಗಳು ಶಕ್ತಿಯಾಗಿ ನಿಂತಿವೆ ಎಂದು ಜಗತ್ತಿನ ಅನೇಕ ರಾಷ್ಟ್ರಗಳು ಕರ್ನಾಟಕದ ಮಾದರಿಯನ್ನು ಕೊಂಡಾಡಿವೆ. ಇಂತಹ ಮಹತ್ವದ ಯೋಜನೆಗಳಿಂದ ಯಾವ ಫಲಾನುಭವಿಗಳು ಕೂಡ ವಂಚಿತರಾಗಬಾರದು ಎನ್ನುವುದು ಸರಕಾರದ ಆಶಯವಾಗಿದೆ.

ಯೋಜನೆಗಳಿಂದ ವಂಚಿತವಾಗಿರುವ ಫಲಾನುಭವಿ ಅಥವಾ ಕುಟುಂಬಗಳನ್ನು ಗುರುತಿಸಿ ಅವರಿಗೆ ನ್ಯಾಯ ಒದಗಿಸುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು ಎಂದರು.

ಸಭೆಯಲ್ಲಿ ತಾ.ಪಂ ಇಒ ಚಂದ್ರಶೇಖರ ಕಂದಕೂರ, ತಾ.ಪಂ ವ್ಯವಸ್ಥಾಪಕ ದೇವರಾಜ ಸಜ್ಜನಶೆಟ್ಟರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಆಹಾರ ವಿಭಾಗದ ಅಧಿಕಾರಿಗಳು, ಸಾರಿಗೆ, ಹೆಸ್ಕಾಂ ಇಲಾಖೆಯ ಅಧಿಕಾರಿಗಳು ಸೇರಿದಂತೆ ಗ್ಯಾರಂಟಿ ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

ಪಂಚ ಗ್ಯಾರಂಟಿ ಯೋಜನೆಗಳು ಎಲ್ಲ ಕುಟುಂಬಗಳಿಗೆ ತಲುಪುತ್ತಿದೆಯಾದರೂ ಯೋಜನೆಗಳ ಮಹತ್ವವನ್ನು ಫಲಾನುಭವಿಗಳಿಗೆ ತಿಳಿಸುವುದು ನಮ್ಮ ಕರ್ತವ್ಯವಾಗಿದ್ದು, ಎರಡೂ ತಾಲೂಕಿನ ಪ್ರತಿ ಗ್ರಾಮಗಳಲ್ಲಿ ಜಾಗೃತಿ ಜಾಥಾ ನಡೆಸಬೇಕು, ಫೆ. 18ರಂದು ಗದಗನಲ್ಲಿ ಜರುಗುವ ಜಿಲ್ಲಾ ಗ್ಯಾರಂಟಿ ಸಮಾವೇಶಕ್ಕೆ ಎರಡೂ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಕರೆತರಲು ಸಭೆಯಲ್ಲಿ ಒಮ್ಮತದ ನಿರ್ಧಾರ ತೆಗೆದುಕೊಳ್ಳಲಾಯಿತು.

## ಸಂತ ಸೇವಾಲಾಲರ ಜಯಂತಿ: ಫೆ.17ರಂದು ಜಿಲ್ಲಾ ಮಟ್ಟದ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಸಂತ ಸೇವಾಲಾಲ ಅವರ ಜಯಂತಿಯನ್ನು ಫೆಬ್ರವರಿ 17ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಡಾ. ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್ ಭಾಗವಹಿಸಲಿದ್ದಾರೆ.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಮತ್ತು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಭಾಗವಹಿಸಲಿದ್ದಾರೆ.

ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಮಾಜಿ ಅಧ್ಯಕ್ಷ ಡಾ. ಹರಿಲಾಲ ಪವಾರ ಉಪನ್ಯಾಸ ನೀಡುವರು. ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರಗೇಶ್ ಕೆ.ಆರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ವ್ಹಿ. ಬಳ್ಳಾರಿ ಸಾರ್ವಜನಿಕರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನಿಸಿದ್ದಾರೆ.

## ಸಾಹಿತ್ಯ ಸಮ್ಮೇಳನಕ್ಕೆ ಸಜ್ಜಾದ ಯಳವತ್ತಿ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕ ಮತ್ತು ಯಳವತ್ತಿ (ಕೋಟೆಗ್ರಾಮ) ಗ್ರಾಮಸ್ಥರ ಆಸಕ್ತಿ, ಉತ್ಸಾಹ, ಕ್ರಿಯಾಶೀಲತೆ, ಒಗ್ಗಟ್ಟಿನಿಂದ ಗ್ರಾಮದ ಕೋಟೆ ಆವರಣದಲ್ಲಿ ಲಕ್ಷ್ಮೇಶ್ವರ ತಾಲೂಕಿನ 2ನೇ ಕನ್ನಡ ಸಾಹಿತ್ಯ ಸಮ್ಮೇಳನ ವಿಜೃಂಭಣೆಯಿಂದ ನಡೆಯಲು ಸಜ್ಜಾಗಿದೆ.

ಗ್ರಾಮದ ಮುಖ್ಯ ಸ್ಥಳಗಳು, ರಸ್ತೆ, ಅಂಗಡಿ ಮತ್ತು ಎಲ್ಲರ ಮನೆಗಳಿಗೆ ವಿದ್ಯುತ್ ಅಲಂಕಾರ ಮಾಡಲಾಗಿದೆ ಮತ್ತು ಕನ್ನಡ ಧ್ವಜಗಳು ರಾರಾಜಿಸುತ್ತಿವೆ. ಕನ್ನಡ ನುಡಿ ಜಾತ್ರೆಗೆ ಸ್ವಾಗತ ಕೋರುವ ಬ್ಯಾನರ್‌ಗಳು, ತೋರಣಗಳ ಸ್ವಾಗತ ಮೆರಗು ತಂದಿವೆ. ಗ್ರಾಮದಲ್ಲಿ ಕನ್ನಡ ಹಬ್ಬವನ್ನು ಸಂಭ್ರಮದಿಂದ ಆಚರಣೆ ಮಾಡಲು ಗ್ರಾಮಸ್ಥರು ಹಾಗೂ ಸುತ್ತಮುತ್ತಲಿನ ಗ್ರಾಮದ ಕನ್ನಡದ ಹೃದಯಗಳು ಕಾತುರರಾಗಿದ್ದಾರೆ.

ಆದಿಕವಿ ಪಂಪ ಪ್ರಧಾನ ವೇದಿಕೆ, ಶ್ರೀ ಗುಂಡೇಶ್ವರ ಮಹಾಮಂಟಪ, ಶಿವಶರಣ ಆದಯ್ಯ, ಜಗದ್ಗುರು ಪಕ್ಕೀರೇಶ್ವರ, ಕವಿ ನಯಸೇನ ಮಹಾದ್ವಾರ, ಉಡಚಮ್ಮದೇವಿ ದಾಸೋಹದ್ವಾರ, ಪಂಡಿತ ಪುಟ್ಟರಾಜ ಗವಾಯಿಗಳ ಮಳಿಗೆಗಳು ಸಮ್ಮೇಳನದ ಆಕರ್ಷಣೆಯಾಗಿವೆ.

ಶನಿವಾರ ಬೆಳಿಗ್ಗೆ ತಾಯಿ ಭುವನೇಶ್ವರಿಯ ಭಾವಚಿತ್ರ ಹಾಗೂ ಸಮ್ಮೇಳನಾಧ್ಯಕ್ಷರ ಮೆರವಣಿಗೆ, ಬಳಿಕ ಕವಿ, ಕೃಷಿ, ಮಹಿಳಾ ಮತ್ತು ಮಕ್ಕಳ ಸಾಹಿತ್ಯ ಗೋಷ್ಠಿ, ಐತಿಹಾಸಿಕ ಯಳವತ್ತಿ ಗ್ರಾಮ, ತಾಲೂಕು ದರ್ಶನ, ಜನಪದ, ಭರತನಾಟ್ಯ ವೀಣಾವಾದನ, ಮಹಿಳಾ ಕಲಾ ಪ್ರದರ್ಶನ, ಚಿತ್ರಕಲಾ ಪ್ರದರ್ಶನ, ಆಸಕ್ತರಿಗಾಗಿ ಕನ್ನಡ ಟ್ಯಾಟು ಹೀಗೆ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಸಮ್ಮೇಳನದಲ್ಲಿ ಸಾಹಿತಿಗಳು, ಸಾಹಿತ್ಯಾಸಕ್ತರು, ಶಿಕ್ಷಕರು, ಶಾಲಾ ▶▶3ನೇ ಪುಟಕ್ಕೆ

### ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ಮೂ ಸತೀಶ ಎಂ

# ಜೀತ ಪದ್ಧತಿ ನಿರ್ಮೂಲನೆ ಎಲ್ಲರ ಕರ್ತವ್ಯ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಹಲವಾರು ರೂಪಗಳಲ್ಲಿ ಜೀತ ಪದ್ಧತಿ ಇನ್ನೂ ಸಮಾಜದಲ್ಲಿ ಜೀವಂತವಾಗಿದೆ. ಅದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದಕ್ಕೆ ಸರ್ಕಾರ, ನ್ಯಾಯಾಂಗ ಇಲಾಖೆ ಮತ್ತು ಪೊಲೀಸ್ ಇಲಾಖೆಗೆ ಸಾರ್ವಜನಿಕರು ಸಹಕಾರ ನೀಡಬೇಕು. ಜೀತ ಪದ್ಧತಿ ನಿರ್ಮೂಲನೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಲಕ್ಷ್ಮೇಶ್ವರ ದಿವಾಣಿ ನ್ಯಾಯಾಧೀಶ ಸತೀಶ ಎಂ ಹೇಳಿದರು.

ಅವರು ಶುಕ್ರವಾರ ಶಿರಹಟ್ಟಿಯ ಎಫ್.ಎಂ. ಡಬಾಲಿ ಪ್ರೌಢಶಾಲೆಯಲ್ಲಿ ತಾಲೂಕಾ ಕಾನೂನು ಸೇವೆಗಳ ಸಮಿತಿ ಲಕ್ಷ್ಮೇಶ್ವರ, ವಕೀಲರ ಸಂಘ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ, ಪೊಲೀಸ್ ಇಲಾಖೆ, ತಾಲೂಕಾಡಳಿತ, ತಾಲೂಕು ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ ಶಿರಹಟ್ಟಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ನೀವು ಭವಿಷ್ಯದ ನಾಗರಿಕರಾಗಿದ್ದೀರಿ, ಯಾವುದೇ ರೀತಿಯ ಜೀತ ಪದ್ಧತಿಯ ಪ್ರಕರಣಗಳು ನಿಮ್ಮ ಗಮನಕ್ಕೆ ಬಂದಲ್ಲಿ ಸಂಬಂಧಿಸಿದ ಇಲಾಖೆಗಳು ಹಾಗೂ ಸಹಾಯವಾಣಿಗಳಿಗೆ ಮಾಹಿತಿ ನೀಡಬೇಕು. ಇದರಿಂದ ▶▶3ನೇ ಪುಟಕ್ಕೆ

ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ ಮಾತನಾಡಿ, ಶಾಲಾ ಹಂತದಲ್ಲಿ ಜೀತ ಪದ್ಧತಿಯ ನಿರ್ಮೂಲನೆಗೆ ನ್ಯಾಯಾಂಗ ಮತ್ತು ಪೊಲೀಸ್ ಇಲಾಖೆಗಳ ಸಹಯೋಗದಲ್ಲಿ ಇಂತಹ ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದ್ದು, ವಿದ್ಯಾರ್ಥಿಗಳ ಗಮನಕ್ಕೆ ಇಂತಹ ಜೀತ ಪದ್ಧತಿಯ ಪ್ರಕರಣ ಕಂಡುಬಂದರೆ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ಕವನ

## ಓ ನನ್ನ ನಲ್ಲೆ



ಓ ನನ್ನ ನಲ್ಲೆ
ನೀ ಎಲ್ಲಿರುವೆಯ ನಲ್ಲೆ
ಈ ಕನಸುಗಾರನ ಹೃದಯಕ್ಕೆ
ಬಾ ಬೇಗನೇ ನಲ್ಲೆ
ಈ ಪೆನ್-ಕಾಗದದ ಹಾಳೆ
ನಮ್ಮ ಪ್ರೀತಿಯ ಸಂದೇಶದ ಓಲೆ
ಕನಸಿಗೆ ಬಂದು ಹೋಗಬೇಡ ನಲ್ಲೆ
ನನಸಿಗೆ ಬಾರೇ ನನ್ನ ಪ್ರೀತಿಯ ನಲ್ಲೆ
ಆ ಚಂದ್ರಿರನ ಬೆಳಕಿನಲ್ಲಿ
ನಿನ್ನದ ಬಿಂಬವೇ ನಲ್ಲೆ
ಎಲ್ಲಿರುವೆಯೇ ನಲ್ಲೆ
ನನ್ನ ಪ್ರೀತಿಯ ನಲ್ಲೆ
ನೆನಪುಗಳು ಸವಿ ನೆನಪಾಗಿರಲಿ
ಕನಸುಗಳು ಬಂದು ಹೋಗದೇ ಇರಲಿ ನಲ್ಲೆ
ದೇವಸ್ಥಾನದ ಘಂಟೆಗಳ ಶಬ್ದ ನೆನಪಾಯಿತು ನಲ್ಲೆ
ನೀ ಬರುವೆಯೆಂದು ಕಾದಿರುವೆ ಇಲ್ಲೇ
ಆ ಮೊದಲ ನೋಟ
ನನ್ನ ಹೃದಯ ಆಗಿದೆಯೇ ಶಿಲೆ
ಓ ನನ್ನ ನಲ್ಲೆ
ನೀ ಎಲ್ಲಿರುವೇ ನಲ್ಲೆ

**– ವಿ.ಎಂ.ಎಸ್. ಗೋಪಿ.**
ಲೇಖಕರು, ಬೆಂಗಳೂರು.

---

**ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್-ಧನ್ ಯೋಜನೆ**

# ಜೀವನ ಸಂಧ್ಯೆಯ ಆರ್ಥಿಕ ಸುರಕ್ಷತೆ

ಅಸಂಘಟಿತ ಕಾರ್ಮಿಕರಿಗೆ ಅವರ ಜೀವನ ಸಂಧ್ಯಾಕಾಲದಲ್ಲಿ ದುಡಿದು ತಮ್ಮನ್ನು ಪೋಷಿಸಿಕೊಳ್ಳಲು ಆರ್ಥಿಕ ಮೂಲಗಳು ಇರುವುದಿಲ್ಲ. ಇಂತಹ ಅಸಂಘಟಿತ ವಲಯದ ಕಾರ್ಮಿಕರಿಗೆ ಅವರ ವೃದ್ಧಾಪ್ಯದ ವೇಳೆಯಲ್ಲಿ ಸಾಮಾಜಿಕ ಭದ್ರತೆ ಕಲ್ಪಿಸಲು ಭಾರತ ಸರ್ಕಾರವು ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ (ಪಿಎಂ-ಎಸ್‌ವೈಎಂ) ಎಂಬ ಮಹತ್ವಾಕಾಂಕ್ಷಿ ವಂತಿಗೆ ಆಧಾರಿತ ಪಿಂಚಣಿ ಯೋಜನೆಯನ್ನು ಅಸಂಘಟಿತ ಕಾರ್ಮಿಕರಿಗೆ ಜಾರಿಗೆ ತಂದಿದೆ.

ಭಾರತ ದೇಶದ ಅರ್ಧದಷ್ಟು ಆದಾಯವು ಅಸಂಘಟಿತ ವಲಯದ 42 ಕೋಟಿ ಕಾರ್ಮಿಕರಿಂದ ಉತ್ಪಾದನೆಯಾಗುತ್ತಿದೆ. ನಮ್ಮ ದೈನಂದಿನ ಜೀವನದಲ್ಲಿ ಗೃಹ ಆಧಾರಿತ ಕಾರ್ಮಿಕರು, ಬೀದಿ ಬದಿ ವ್ಯಾಪಾರಿಗಳು, ಬಿಸಿಯೂಟ ಸಿದ್ಧಪಡಿಸುವವರು, ಹಮಾಲಿಗಳು, ಇಟ್ಟಿಗೆ ಭಟ್ಟಿ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಕೈಮಗ್ಗ ಕಾರ್ಮಿಕರು, ಚರ್ಮೋದ್ಯಮದ ಕಾರ್ಮಿಕರು, ಧ್ವನಿ ಮತ್ತು ದೃಶ್ಯ ಕಾರ್ಮಿಕರು ಮತ್ತು ಇದೇ ರೀತಿಯ ಇತರೆ ಉದ್ಯೋಗಗಳ ಕೆಲಸಗಾರರು ಅಸಂಘಟಿತ ಕಾರ್ಮಿಕರಾಗಿ ಕೆಲಸ ನಿರ್ವಹಿಸುತ್ತಿರುವುದನ್ನು ಕಾಣುತ್ತಿದ್ದೇವೆ.




**ಫಲಾನುಭವಿಗಳಿಗೆ ಇರಬೇಕಾದ ಅರ್ಹತೆಗಳು:** ಯೋಜನೆಗೆ ಒಳಪಡುವ ಕಾರ್ಮಿಕರು ಅಸಂಘಟಿತ ವಲಯದ ಕಾರ್ಮಿಕರಾಗಿದ್ದು, 18ರಿಂದ 40 ವರ್ಷದೊಳಗಿರಬೇಕು. ಅವರ ಮಾಸಿಕ ಆದಾಯ ರೂ. 15 ಸಾವಿರ ಅಥವಾ ಅದಕ್ಕಿಂತ ಕಡಿಮೆ ಇರಬೇಕು. ಅವರು ಆದಾಯ ತೆರಿಗೆ, ಇ.ಎಸ್.ಐ./ಪಿ.ಎಫ್ /ಎನ್.ಪಿ.ಎಸ್. ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರಬಾರದು. ಬ್ಯಾಂಕ್ ಉಳಿತಾಯ ಖಾತೆ ಮತ್ತು ಆಧಾರ್ ಸಂಖ್ಯೆ ಹೊಂದಿರಬೇಕು.

**ಫಲಾನುಭವಿಗಳು ನೋಂದಣಿ ವಿಧಾನಗಳು:** ಅರ್ಹ ಅಸಂಘಟಿತ ಕಾರ್ಮಿಕರು ಹತ್ತಿರದ ಕಾಮನ್ ಸರ್ವಿಸ್ ಸೆಂಟರ್ (ಸಿ.ಎಸ್.ಸಿ)ಗಳಲ್ಲಿ ಯೋಜನೆಯಡಿ ಫಲಾನುಭವಿಗಳಾಗಿ ನೋಂದಾಯಿಸಬಹುದು. ಸಿ.ಎಸ್.ಸಿ.ಗಳ ವಿವರಗಳನ್ನು ಹತ್ತಿರದ ಎಲ್.ಐ.ಸಿ ಶಾಖೆಗಳು, ಕಾರ್ಮಿಕ ಇಲಾಖೆ, ಕೇಂದ್ರ ಸರಕಾರದ ಕಾರ್ಮಿಕ ಇಲಾಖೆ ಇ.ಎಸ್.ಐ ಕಾರ್ಪೊರೇಷನ್ ಹಾಗೂ ಭವಿಷ್ಯ ನಿಧಿ ಸಂಘಟನೆಯ ಕಚೇರಿಗಳು ಹಾಗೂ ಇಲಾಖೆಯ ವೆಬ್ ವಿಳಾಸಗಳು ಹಾಗೂ http://locator.csccloud.in ಗಳಲ್ಲಿ ಪಡೆಯಬಹುದಾಗಿದೆ.

ಕಾರ್ಮಿಕರು ತಮ್ಮೊಂದಿಗೆ ಆರಂಭಿಕ ವಂತಿಕೆ ಮೊತ್ತ, ಆಧಾರ್ ಕಾರ್ಡ್ ಖಾತೆ ಹೊಂದಿರುವ ಬ್ಯಾಂಕಿನ ಐ.ಎಫ್.ಎಸ್.ಸಿ ಕೋಡ್ ವಿವರಗಳೊಂದಿಗೆ ತಮ್ಮ ನಾಮನಿರ್ದೇಶಿತರ ವಿವರಗಳು ಮತ್ತು ಮೊಬೈಲ್‌ನೊಂದಿಗೆ ಕಾಮನ್ ಸರ್ವಿಸ್ ಸೆಂಟರ್‌ಗಳಿಗೆ ತೆರಳಿ ಈ ಯೋಜನೆಗೆ ನೋದಾಯಿಸಿಕೊಳ್ಳಬಹುದು.

ಯೋಜನೆಯ ಸೌಲಭ್ಯ, ಪ್ರಯೋಜನಗಳು: ಕೇಂದ್ರ ಸರ್ಕಾರವು ಚಂದಾದಾರರು ಪಾವತಿಸುವ ವಂತಿಕೆಗೆ ಸಮಾನಾಂತರ ವಂತಿಕೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ. ಫಲಾನುಭವಿಯ ವಯಸ್ಸು 60 ವರ್ಷ ಪೂರ್ಣಗೊಂಡ ನಂತರ ತಿಂಗಳಿಗೆ 3000 ರೂ.,ಗಳ ಖಚಿತ ಕನಿಷ್ಠ ಮಾಸಿಕ ಪಿಂಚಣಿಯನ್ನು ಪಡೆಯಲು ಅರ್ಹರಾಗುತ್ತಾರೆ. ಚಂದದಾರರು ಹತ್ತು ವರ್ಷದೊಳಗಾಗಿ ಯೋಜನೆಯಿಂದ ನಿರ್ಗಮಿಸಿದ್ದಲ್ಲಿ ಅವರು ಪಾರ್ವತಿಸಿರುವ ವಂತಿಕೆಯನ್ನು ಮಾತ್ರ ಆ ಅವಧಿಗೆ ಉಳಿತಾಯ ಖಾತೆಗೆ ಪಾವತಿಸಲಾಗುವ ಬಡ್ಡಿಯೊಂದಿಗೆ ಹಿಂದಿರುಗಿಸಲಾಗುತ್ತದೆ. 10 ವರ್ಷ ಅಥವಾ ಅದಕ್ಕಿಂತ ಹೆಚ್ಚು ಅವಧಿಯ ನಂತರ ನಿರ್ಗಮಿಸಿದ್ದಲ್ಲಿ ಅವರು ಪಾವತಿಸಿದ ವಂತಿಕೆಯೊಂದಿಗೆ ಪಿಂಚಣಿ ಖಾತೆಗೆ ಜಮೆಯಾಗಿರುವ ಬಡ್ಡಿ ಅಥವಾ ಉಳಿತಾಯ ಖಾತೆಗೆ ಪಾವತಿಸಲಾಗುವ ಬಡ್ಡಿ ಇವುಗಳಲ್ಲಿ ಯಾವುದು ಹೆಚ್ಚೋ ಅದನ್ನು ಪಾವತಿಸಲಾಗುವುದು. ಫಲಾನುಭವಿಯ ನಿರಂತರವಾಗಿ ವಂತಿಕೆಯನ್ನು ಪಾವತಿಸಿದ್ದು, ಅವರು 60 ವರ್ಷದ ಒಳಗಾಗಿ ಮೃತಪಟ್ಟಲ್ಲಿ ಅಥವಾ ಶಾಶ್ವತ ಅಂಗ ನ್ಯೂನತೆಯಿಂದ ವಂತಿಕೆಯನ್ನು ಪಾವತಿಸಲು ಸಾಧ್ಯವಾಗದಿದ್ದಲ್ಲಿ ಅವರ ಸಂಗಾತಿಯು ತದನಂತರ ಈ ಯೋಜನೆಗೆ ಸೇರಬಹುದಾಗಿದ್ದು, ವಂತಿಕೆಯನ್ನು ಪಾವತಿಸಿ ಮುಂದುವರೆಸಬಹುದಾಗಿದೆ ಅಥವಾ ಅವರ ವಂತಿಕೆಯನ್ನು ಬಡ್ಡಿಯೊಂದಿಗೆ ಪಡೆಯಲು ಅರ್ಹರು. ಪಿಂಚಣಿ ಆರಂಭಗೊಂಡ ನಂತರ ಚಂದಾದಾರರು ಮೃತಪಟ್ಟಲ್ಲಿ, ಅವರ ಪತ್ನಿ / ಪತಿ ಮಾತ್ರ ಪಿಂಚಣಿಯ ಶೇ. 50ರಷ್ಟು ಪಿಂಚಣಿಯನ್ನು ಪಡೆಯಲು ಅರ್ಹರು. ಯೋಜನೆಯ ವಿದ್ಯುನ್ಮಾನ ಆಧಾರಿತವಾಗಿದ್ದು, ಎಸ್.ಎಂ.ಎಸ್ ಮೂಲಕ ಎಲ್ಲಾ ವ್ಯವಹಾರಗಳ ಮಾಹಿತಿಯನ್ನು ಫಲಾನುಭವಿಗಳಿಗೆ ಕಾಲ ಕಾಲಕ್ಕೆ ತಿಳಿಸಲಾಗುವುದು.

**ಸಂಪರ್ಕಿಸಬೇಕಾದ ವಿಳಾಸಗಳು:** ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಮಿಕ ಇಲಾಖೆ ಕಚೇರಿಗಳು, ಶಾಖಾ ಕಚೇರಿಗಳು, ಎಲ್.ಐ.ಸಿಯ ಶಾಖಾ ಕಚೇರಿಗಳು, ಇ.ಪಿ.ಎಫ್.ಓ ಮತ್ತು ಇ.ಎಸ್.ಐ.ಸಿ ಕಚೇರಿಗಳಲ್ಲಿ ಟೋಲ್ ಫ್ರೀ ಕಾಲ್ ಸೆಂಟರ್ ಸಂಖ್ಯೆ: 1800-267-6888, ಎಲ್.ಐ.ಸಿಯ ವೆಬ್‌ಸೈಟ್ ವಿಳಾಸ: www.licindia.in, ಸಮೀಪದ ಸಿ.ಎಸ್.ಸಿ ಸೆಂಟರ್‌ಗಳಿಗಾಗಿ http://locator.csccloud.in ಸಂಪರ್ಕಿಸಬಹುದು. ಅಸಂಘಟಿತ ಕಾರ್ಮಿಕರು ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಸಹಾಯವಾಣಿ ಸಂಖ್ಯೆಗೆ-155214 ಕರೆಮಾಡಿ ಗೊಂದಲಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.

**– ಯುವರಾಜ್ ಸಿ.ಎಲಿಗಾರ.**
ಪ್ರಶಿಕ್ಷಣಾರ್ಥಿ, ವಾರ್ತಾ ಮತ್ತು ಸಾ.ಸಂ.ಇಲಾಖೆ, ಗದಗ.

---

**ರಾಜ್ಯ-ನೆರೆಯ ರಾಜ್ಯಗಳಿಂದ ಭಕ್ತರ ಸಾಗರ-ಮೂಲ ನಕ್ಷತ್ರದಲ್ಲಿ ಅತಿ ಎತ್ತರದ ತೇರು ಎಳೆತ!**

# ಐದು ಲಕ್ಷಕ್ಕೂ ಅಧಿಕ ಭಕ್ತರ ಸಮ್ಮುಖದಲ್ಲಿ ಶ್ರೀ ಗುರು ಕೊಟ್ಟೂರೇಶ್ವರ ರಥೋತ್ಸವ ವೈಭವ!



**■ ವಿಜಯಸಾಕ್ಷಿ ಸುದ್ದಿ, ಕೊಟ್ಟೂರು**

ಶ್ರೀ ಕ್ಷೇತ್ರ ಕೊಟ್ಟೂರಿನ ಪವಾಡ ಪುರುಷ ಶ್ರೀ ಗುರು ಕೊಟ್ಟೂರೇಶ್ವರರ ರಥೋತ್ಸವವು ಗುರುವಾರ ಅತ್ಯಂತ ಸಂಭ್ರಮಭರಿತವಾಗಿ ಜರುಗಿತು. ರಾಜ್ಯದ ವಿವಿಧ ಜಿಲ್ಲೆಗಳು ಸೇರಿದಂತೆ ನೆರೆಯ ರಾಜ್ಯಗಳಿಂದ ಆಗಮಿಸಿದ ಅಂದಾಜು ಐದು ಲಕ್ಷಕ್ಕೂ ಅಧಿಕ ಭಕ್ತರು ಜಾತ್ರೆಯಲ್ಲಿ ಭಾಗವಹಿಸಿ ರಥೋತ್ಸವದ ದರ್ಶನ ಪಡೆದರು.

ಮೂಲ ನಕ್ಷತ್ರ ಸಮಯದಲ್ಲಿ ಅತಿ ಎತ್ತರದ ತೇರನ್ನು ಲಕ್ಷಾಂತರ ಭಕ್ತರ ಸಮೂಹದ ಮಧ್ಯೆ ಎಳೆಯಲಾಯಿತು. ಈ ಅಪೂರ್ವ ಕ್ಷಣವನ್ನು ಕಣ್ತುಂಬಿಕೊಳ್ಳಲು ಎರಡು ಕಣ್ಣು ಸಾಲದು ಎಂಬ ಭಾವನೆ ಭಕ್ತರಲ್ಲಿ ಮೂಡಿತು.

**ಇಷ್ಟಾರ್ಥ ಈಡೇರಿಸುವ ದೈವದ ನಂಬಿಕೆ :** ತಮ್ಮ ಇಷ್ಟಾರ್ಥ ಈಡೇರಿಕೆಗೆ ಸಾವಿರಾರು ಭಕ್ತರು ನೂರಾರು ಕಿಲೋಮೀಟರ್ ದೂರದಿಂದ ಪಾದಯಾತ್ರೆ ಮೂಲಕ ಆಗಮಿಸಿದರು. "ಗುರು ಕೊಟ್ಟೂರೇಶ್ವರ ಕೃಪೆಯಿಂದ ಮನೋಭಿಲಾಷೆ ಈಡೇರುತ್ತದೆ" ಎಂಬ ನಂಬಿಕೆ ಭಕ್ತರಲ್ಲಿ ಗಾಢವಾಗಿದೆ.

**ಜಾತಿ-ಮತ ಭೇದವಿಲ್ಲದ ಸೇವೆ:** ಶ್ರೀ ಕ್ಷೇತ್ರದಲ್ಲಿ ಜಾತಿ, ಮತ, ಪಂಥ ಭೇದವಿಲ್ಲದೆ ಲಕ್ಷಾಂತರ ಭಕ್ತರು ಸೇರಿದ್ದರು. ಭಕ್ತರಿಗೆ ತಂಪು ಪಾನೀಯ ಹಾಗೂ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಶ್ರೀಗುರು ಕೊಟ್ಟೂರೇಶ್ವರರಿಗೆ ಎಲ್ಲ ಧರ್ಮೀಯರ ಭಕ್ತಿ ಇದೆ ಎಂಬುದು ಇಲ್ಲಿ ಸ್ಪಷ್ಟವಾಗಿ ಗೋಚರಿಸಿತು.

**ವಾದ್ಯಮೇಳದ ಸಂಭ್ರಮ:** ಸಮಾಳ, ನಂದಿಕೋಲು ಸೇರಿದಂತೆ ವಿವಿಧ ವಾದ್ಯಮೇಳಗಳು ರಥೋತ್ಸವಕ್ಕೆ ಮೆರಗು ತಂದವು. ಪಲ್ಲಕ್ಕಿಯನ್ನು ರಥದ ಸುತ್ತ ಐದು ಸುತ್ತು ಪ್ರದಕ್ಷಿಣೆ ಹಾಕಿ, ಬಳಿಕ ಸ್ವಾಮಿಯನ್ನು ರಥದೊಳಗೆ ಪ್ರತಿಷ್ಠಾಪಿಸಲಾಯಿತು. ರಥವನ್ನು ಪಾದಗಟ್ಟೆ ಬಸವೇಶ್ವರ ದೇವಸ್ಥಾನವರೆಗೆ ಎಳೆದು, ನಂತರ ರಥಬೀದಿಯ ಮೂಲಕ ಸಾಗಿಸಲಾಯಿತು.

ರಥೋತ್ಸವಕ್ಕೆ ಚಾಲನೆ ದೊರಕುತ್ತಿದ್ದಂತೆ ಭಕ್ತರು "ಕೊಟ್ಟೂರು ದೊರೆಯೇ, ನಿನಗಾರು ಸರಿಯೇ ಸರಿ ಸರಿ ಅಂದವರ ಹಲ್ಲು ಮುರಿವೆ ಬಹುಪರಾಕ್!" ಎಂಬ ಘೋಷಣೆಗಳಿಂದ ಮೊಳಗಿಸಿದರು.

**ಮಹಿಳೆಯಿಂದ ಕಳಸದಾರತಿ, ಧೂಪದಾರತಿ!**

ರಥೋತ್ಸವಕ್ಕೂ ಮುನ್ನ ಸ್ವಾಮಿಯ ಮೂರ್ತಿಯನ್ನು ಬೆಳ್ಳಿ ಪಲ್ಲಕ್ಕಿಯಲ್ಲಿ ಮೆರವಣಿಗೆ ಮಾಡಲಾಯಿತು. ದಿನವಿಡೀ ಉಪವಾಸವಿದ್ದ ಪರಿಶಿಷ್ಟ ಜಾತಿ ಮಹಿಳೆಯೊಬ್ಬರು ಪಲ್ಲಕ್ಕಿಯಲ್ಲಿರುವ ಸ್ವಾಮಿಗೆ ಕಳಸದಾರತಿ ಹಾಗೂ ಧೂಪದಾರತಿ ಸಲ್ಲಿಸಿದರು. ಆ ಬಳಿಕ ಪಲ್ಲಕ್ಕಿ ಉತ್ಸವ ತೇರು ಬಜಾರ್ ಮೂಲಕ ಸಾಗಿಸಿ ರಥೋತ್ಸವ ಸ್ಥಳಕ್ಕೆ ತರಲಾಯಿತು.

---

**ಚೇತನ ಕರಾಟೆ ಕ್ಲಬ್‌ನಿಂದ ತರಬೇತಿ ಶಿಬಿರಕ್ಕೆ ಚಾಲನೆ**

# ಆತ್ಮ ವಿಶ್ವಾಸ ಮೂಡಿಸುವ ಕರಾಟೆ ಕಲಿಯಿರಿ



**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ದೈಹಿಕ, ಮಾನಸಿಕವಾಗಿ ಆತ್ಮಸ್ಥೈರ್ಯ ತುಂಬುವ ಕರಾಟೆ ವ್ಯಾಯಾಮದ ತರಬೇತಿ ಪಡೆದುಕೊಂಡು ಬಾಲಕ-ಬಾಲಕಿಯರು ತಮ್ಮನ್ನು ತಾವು ರಕ್ಷಣೆ ಮಾಡಿಕೊಳ್ಳಬಹುದಾಗಿದೆ ಎಂದು ಗ್ರಾ.ಪಂ ನಿವೃತ್ತ ಕಾರ್ಯದರ್ಶಿ ಶಿವಪ್ಪ ಸಜ್ಜನರ ಹೇಳಿದರು.

ಇಲ್ಲಿಯ ದುರ್ಗಾದೇವಿ ಸಭಾ ಭವನದಲ್ಲಿ ಚೇತನ ಕರಾಟೆ ಕ್ಲಬ್ ಏರ್ಪಡಿಸಿದ್ದ ಕರಾಟೆ, ಲಾಠಿ ತರಬೇತಿ ಶಿಬಿರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾಲಕ-ಬಾಲಕಿಯರು ತಮ್ಮ ಆತ್ಮಸ್ಥೈರ್ಯ ಹೆಚ್ಚಿಸಿಕೊಳ್ಳಲು ಕರಾಟೆ, ಯೋಗ, ಧ್ಯಾನ ಅವಶ್ಯವಾಗಿದೆ. ಪಾಲಕರು ತಮ್ಮ ಮಕ್ಕಳನ್ನು ಈ ತರಬೇತಿ ಶಿಬಿರಕ್ಕೆ ಕಳುಹಿಸಬೇಕು. ಇದರಲ್ಲಿ ಕೌಶಲ್ಯವಂತರಾದ ಕರಾಟೆ ಪಟುಗಳನ್ನು ಗ್ರಾಮದಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಪ್ರದರ್ಶನ ಮಾಡಿಸಬೇಕು. ಅಂದಾಗ ಬೇರೊಬ್ಬರ ಮೇಲೆ ಪರಿಣಾಮವಾಗಿ ಹೆಚ್ಚೆಚ್ಚು ವಿದ್ಯಾರ್ಥಿಗಳು ಪಾಲ್ಗೊಳ್ಳುತ್ತಾರೆ ಎಂದು ಸಲಹೆ ನೀಡಿದರು.

ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಮಾತನಾಡಿ, ಕಳೆದ 8 ವರ್ಷಗಳಿಂದ ಗ್ರಾಮದಲ್ಲಿ ಕರಾಟೆ ತರಬೇತಿ ನೀಡುತ್ತಿರುವ ಚೇತನ ಕರಾಟೆ ಕ್ಲಬ್‌ನ ವಿದ್ಯಾರ್ಥಿಗಳು ರಾಜ್ಯ ಮಟ್ಟದವರೆಗೂ ಕರಾಟೆ ಸ್ಪರ್ಧೆಯಲ್ಲಿ ಪಾಲ್ಗೊಂಡು ಯಶಸ್ಸು ಗಳಿಸಿದ್ದು ಸಂತಸ ವಿಷಯವಾಗಿದೆ ಎಂದರು. ತರಬೇತುದಾರ ಗಂಗಾಧರ ಸಾಸ್ವಿಹಳ್ಳಿ ಮಾತನಾಡಿ, 8 ವರ್ಷಗಳಿಂದ ಗ್ರಾಮದಲ್ಲಿ ಹಲವಾರು ವಿದ್ಯಾರ್ಥಿಗಳಿಗೆ ತರಬೇತಿ ನೀಡುತ್ತಿದ್ದು, ಇಲ್ಲಿ ಕಲಿತ ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರ ಮಟ್ಟದವರೆಗೂ ಸ್ಪರ್ಧಿಸಿ ಪ್ರಶಸ್ತಿ ಪಡೆದಿದ್ದಾರೆ. ಈ ವರ್ಷ 4 ವಿದ್ಯಾರ್ಥಿಗಳು ಬ್ಲಾಕ್ ಬೆಲ್ಟ್ ತರಬೇತಿ ಪಡೆಯುವ ಹಂತದಲ್ಲಿದ್ದಾರೆ ಎಂದು ವಿವರಿಸಿದರು.

ಗ್ರಾ.ಪಂ ಮಾಜಿ ಉಪಾಧ್ಯಕ್ಷೆ ಪ್ರೇಮಾ ಮಟ್ಟಿ ಕಾರ್ಯಕ್ರಮ ಉದ್ಘಾಟಿಸಿದರು. ತರಬೇತಿ ಪಡೆದ ಮಕ್ಕಳು ಕರಾಟೆ, ಲಾಠಿಯ ವಿವಿಧ ಭಂಗಿಗಳನ್ನು ಪ್ರದರ್ಶಿಸಿ ಅನುಭವ ಹಂಚಿಕೊಂಡರು. ಮಾಜಿ ಯೋಧ ಪಿ.ಎಸ್. ಗುಂಡಳ್ಳಿ, ಮಂಜುನಾಥ ಪುರದ, ನೀಲವ್ವ ವಡ್ಡರ ವೇದಿಕೆಯಲ್ಲಿದ್ದರು. ಶಿಕ್ಷಕ ಮುತ್ತುರಾಜ್ ಗಡ್ಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

---

**ಹಿಂದೆ ಬಿಳಿ ಕಾಗದದ ಮೇಲೆ ಪ್ರೀತಿಯ ಮಸಿ, ಇಂದು ಮೊಬೈಲ್‌ನ ಬ್ಲೂ ಟಿಕ್!**

# ಇದೆಂಥಾ ಕಾಲ, ಇದೆಂಥಾ ಪ್ರೀತಿ?!

ಇಂದಿನ ಯುವಕ-ಯುವತಿಯರ ಬದುಕು ನೋಡಿದ್ರೆ ಹೊರಗೆ ಎಲ್ಲಾ ಸ್ಟೈಲ್-ಸ್ಮೈಲ್ ಲವ್ ಸ್ಟೋರಿ ಅಂತ ಕಾಣ್ತದೆ. ಮೊಬೈಲ್ ತೆರೆದ-ರೆ ಸ್ಟೇಟಸ್‌ನಲ್ಲಿ ದೊಡ್ಡ ದೊಡ್ಡ ಮಾತುಗಳು ಫಾರೆವರ್, ಮೈ ಲೈಫ್, ನಿನ್ನಿಲ್ಲದೆ ನಾನಿಲ್ಲ. ಫೋಟೋಗೆ ನೂರು ಲೈಕ್, ಕಾಮೆಂಟ್‌ಗೆ ಹೃದಯ ಗುರುತು. ಆದ್ರೆ ಆ ನಗುವಿನ ಹಿಂದೆ ಏನಿದೆ ಅಂದ್ರೆ ಗೊಂದಲ, ಅನುಮಾನ, ಒಂಟಿತನ. ಈ ಪ್ರೀತಿ ನಿಜಾನಾ, ಇವನು-ಇವಳು ನಾಳೆ ಇರ್ತಾರಾ ಅನ್ನೋ ಪ್ರಶ್ನೆ ಪ್ರತಿಯೊಬ್ಬ ಯುವ ಮನಸ್ಸನ್ನ ಕಾಡ್ತಿದೆ.

ಒಮ್ಮೆ ಹಿಂದಿನ ಕಾಲ ನೆನಪಿಸ್ಕೊಳ್ಳಿ. ಆಗ ಪ್ರೀತಿ ಅಂದ್ರೆ ಪತ್ರದ ಮಸಿ. ಒಂದು ಕಾಗದದಲ್ಲಿ ಬರೆಯೋ ಮಾತು ಹೃದಯದೊಳಗಿಂದ ಬಂದ ಪದ. ಒಂದು ಪತ್ರ ಬರೆಯೋಕೆ ದಿನಗಳು, ಉತ್ತರ ಬರೋಕೆ ವಾರಗಳು. ಆದ್ರೂ ಆ ಕಾಯುವಿಕೆಯಲ್ಲಿ ನಂಬಿಕೆ ಇತ್ತು, ಗೌರವ ಇತ್ತು. ಇವತ್ತು ಮೊಬೈಲ್ ಕಾಲ. ಕ್ಷಣದಲ್ಲೇ ಮೆಸೇಜ್, ಕ್ಷಣದಲ್ಲೇ ರಿಪ್ಲೈ, ಕ್ಷಣದಲ್ಲೇ ಜಗಳ. ಪತ್ರದ ಮಸಿ ಒಣಗೋವರೆಗೂ ಪ್ರೀತಿ ಗಟ್ಟಿಯಾಗ್ತಿತ್ತು. ಈಗ ಬ್ಲೂ ಟಿಕ್ ಕಾಣಿಸಿದ ಕ್ಷಣದಲ್ಲೇ ಅನುಮಾನ ಶುರುವಾಗ್ತಿದೆ.

ಉತ್ತರ ಕರ್ನಾಟಕದ ಹುಡುಗರೂ, ಹುಡುಗಿಯರೂ ಮನಸ್ಸು ಸಾದಾ. ಒಮ್ಮೆ ನಂಬಿದ್ರೆ ಪೂರ್ಣ ಹೃದಯ ಕೊಡ್ತಾರೆ. ಆದರೆ ಇವತ್ತಿನ ಸಂಬಂಧಗಳು ಡೇಟಾ ಪ್ಯಾಕ್ ತರಾ ಆಗಿಬಿಟ್ಟಿವೆ ಅನ್ನೋ ಭಾವನೆ ಜಾಸ್ತಿ. ಮೆಸೇಜ್‌ಗೆ ಉತ್ತರ ತಡವಾದ್ರೆ ಮನಸ್ಸು ಕುಸಿತ. ಆನ್‌ಲೈನ್ ಇದ್ದು ಮಾತಾಡದಿದ್ದರೆ ಅನುಮಾನ. ಹಿಂದೆ ಪತ್ರ ತಡವಾದರೂ ಕೆಲಸ ಇರಬಹುದು ಅಂತ ನಂಬ್ತಿದ್ರು. ಈಗ ಬ್ಲೂ ಟಿಕ್ ನೋಡಿದ್ರೆ ನೋವಿನ ಅಲೆ.



ಯುವಕರು ಈಗ ದೊಡ್ಡ ಕನಸು ಕಾಣ್ತಾರೆ. ಕೆಲಸ, ಹಣ, ಸ್ವಾತಂತ್ರ್ಯ, ಪ್ರೀತಿ ಎಲ್ಲವೂ ಬೇಕು ಅಂತ. ಆದ್ರೆ ಒತ್ತಡವೂ ಅಷ್ಟೇ. ಮನೆಯ ನಿರೀಕ್ಷೆ ಒಂದು ಕಡೆ, ಸಮಾಜದ ಮಾತು ಇನ್ನೊಂದು ಕಡೆ. ತಮ್ಮ ಮನಸ್ಸಿನ ಆಸೆ ಮೂರನೇ ಕಡೆ. ಬದುಕು ಮೂರು ರಸ್ತೆಯ ಸಂಗಮ. ಕೆಲವರು ಪ್ರೀತಿಯಲ್ಲಿ ನೆಮ್ಮದಿ ಹುಡುಕ್ತಾರೆ. ಆದ್ರೇ ಕೆಲವೊಮ್ಮೆ ಅದೇ ಪ್ರೀತಿ ಹೊಸ ಗಾಯ ಕೊಡ್ತದೆ.

ಹುಡುಗಿಯರು ಹೊರಗೆ ಧೈರ್ಯಶಾಲಿಗಳಂತೆ ಕಾಣ್ತಾರೆ. ಆದರೆ ಒಳಗೆ ಪ್ರಶ್ನೆಗಳು ನನ್ನನ್ನು ನಿಜವಾಗಿಯೇ ಪ್ರೀತಿಸ್ತಾನಾ, ನನ್ನ ಗೌರವ ಉಳಿಸ್ತಾನಾ ಇತ್ಯಾದಿ. ಹುಡುಗರೂ ಬೇರೆ ಇಲ್ಲ. ನಾನು ಅವಳಿಗೆ ಸಾಕಾಗ್ತೀನೋ, ಅವಳಿಗೆ ಇನ್ನೊಬ್ಬನ ಮೇಲೆ ಇಷ್ಟ ಆಗಿಬಿಟ್ಟರೆ ಅನ್ನೋ ಆತಂಕ. ಇಬ್ಬರೂ ಪ್ರೀತಿಸ್ತಾರೆ. ಆದರೆ ಇಬ್ಬರ ಮನಸ್ಸಿನೊಳಗೂ ಭಯ ಮೌನವಾಗಿ ಬೆಳೆದಿದೆ.

ಸೋಶಿಯಲ್ ಮೀಡಿಯಾ ಈಗ ಪ್ರೀತಿಯ ಕನ್ನಡಕ. ಇತರರ ಫೋಟೋ ನೋಡಿದ್ರೆ ಎಲ್ಲರ ಜೀವನವೂ ಪರಿಪೂರ್ಣ ಅನ್ನಿಸ್ತದೆ. ಆದ್ರೇ ಅದು ಫಿಲ್ಟರ್ ಖುಷಿ. ನಿಜ ಜೀವನದಲ್ಲಿ ಜಗಳ, ಕಣ್ಣೀರು, ಹೊಂದಾಣಿಕೆ, ತ್ಯಾಗ ಇವೆಲ್ಲಾ ಯಾರೂ ಸ್ಟೇಟಸ್‌ನಲ್ಲಿ ಹಾಕೋದಿಲ್ಲ. ಹಿಂದೆ ಪತ್ರ ಕಾಲದಲ್ಲಿ ಹೋಲಿಕೆ ಕಡಿಮೆ. ಈಗ ಪ್ರತಿದಿನ ಹೋಲಿಕೆ ಜಾಸ್ತಿ. ಅದರಿಂದಲೇ ನಮ್ಮ ಲವ್ ಮಾತ್ರ ತಪ್ಪಾ ಅನ್ನೋ ಬೇಸರ ಯುವಕರಲ್ಲಿ ಹೆಚ್ಚಾಗಿದೆ.

ಇನ್ನೊಂದು ದೊಡ್ಡ ಬದಲಾವಣೆ, ಮಾತು ಕಡಿಮೆ-ಊಹೆ ಜಾಸ್ತಿ. ಹಿಂದೆ ಎದುರಿಗೆ ಕೂತು ಮಾತನಾಡ್ತಿದ್ರು. ಕಣ್ಣಲ್ಲಿ ಕಣ್ಣು ಹಾಕಿ ನೋವು ಹೇಳ್ತಿದ್ರು. ಈಗ ಚಾಟ್‌ನಲ್ಲಿ ಹೃದಯದ ಮಾತು ಹೇಳೋಕೆ ಹೆದರಿಕೆ. ಒಂದು ತಪ್ಪು ಪದ ಬಂದರೂ ಬ್ರೇಕಪ್. ಮನಸ್ಸಿನ ನೋವಿಗೆ ಕಿವಿಗೊಡೋವರು ಕಡಿಮೆ ಅನ್ನೋ ಭಾವನೆ ಹೆಚ್ಚಾಗ್ತಿದೆ. ಆದ್ರೂ ಯುವಕರ ಮನಸ್ಸು ದೊಡ್ಡದು. ಒಮ್ಮೆ ಪ್ರೀತಿಸಿದ್ರೆ ಮರೆಯೋದು ಸುಲಭ ಅಲ್ಲ. ಬ್ರೇಕಪ್ ಆದ್ಮೇಲೆ ಇನ್ನು ಪ್ರೀತಿ ಬೇಡ ಅಂತ ಹೇಳ್ತಾರೆ. ಆದ್ರೇ ಕೆಲ ದಿನಗಳ ಬಳಿಕ ಮತ್ತೆ ಯಾರನ್ನಾದ್ರೂ ನಂಬೋಕೆ ಮನಸ್ಸು ಒಪ್ಪುತ್ತೆ. ಏಕೆಂದರೆ ಪ್ರೀತಿ ಮಾಡೋದು ತಪ್ಪಲ್ಲ ಅದು ಜೀವಂತಿಕೆಯ ಗುರುತು.

ಉತ್ತರ ಕರ್ನಾಟಕದ ಹುಡುಗರು ನೋವನ್ನ ಒಳಗೆ ಇಟ್ಟುಕೊಂಡೇ ನಗೋರು. ಹುಡುಗಿಯರು ಹೊರಗೆ ಧೈರ್ಯ ತೋರಿಸಿ ರಾತ್ರಿ ಒಂಟಿಯಾಗಿ ಕಣ್ಣೀರು ಹಾಕೋರು. ಈ ನಿಜಜೀವನ ಯಾರಿಗೂ ಕಾಣೋದಿಲ್ಲ. ಎಲ್ಲರಿಗೂ ಕಾಣೋದು ಫೋಟೋದಲ್ಲಿನ ನಗು ಮಾತ್ರ.

ಪತ್ರದ ಮಸಿ ಇರಲಿ, ಮೊಬೈಲ್‌ನ ಬ್ಲೂ ಟಿಕ್ ಇರಲಿ ಮಾಧ್ಯಮ ಮಾತ್ರ ಬದಲಾಗಿದೆ. ಆದರೆ ಪ್ರೀತಿಯ ಅರ್ಥ ಬದಲಾಗಬಾರದು. ಪ್ರೀತಿ ಅಂದ್ರೆ ಕೇವಲ ರೊಮ್ಯಾಂಟಿಕ್ ಮಾತು ಅಲ್ಲ. ಅದು ಸಹನೆ, ಗೌರವ, ನಂಬಿಕೆ. ನಿಮ್ಮ ಕಥೆ ನಿಮ್ಮದೇ. ಇತರರ ಸ್ಟೇಟಸ್ ನೋಡಿ ನಿಮ್ಮ ಜೀವನ ತೀರ್ಮಾನ ಮಾಡ್ಬೇಡಿ. ಇಂದಿನ ಯುವಕರು ದುರ್ಬಲರಲ್ಲ. ಅವರು ಹೆಚ್ಚು ಭಾವನಾತ್ಮಕರು ಹೆಚ್ಚು ಕನಸು ಕಾಣೋರು, ಹೆಚ್ಚು ನಂಬಿಕೆ ಇಡುವವರು. ಅದಕ್ಕೆ ಕೆಲವೊಮ್ಮೆ ಹೆಚ್ಚು ನೋವೂ ಆಗ್ತದೆ. ಆದ್ರೂ ಅವರು ಮತ್ತೆ ಎದ್ದು ನಿಂತು ಮತ್ತೆ ನಗ್ತಾರೆ ಮತ್ತೆ ಪ್ರೀತಿಸ್ತಾರೆ.

ಸ್ಟೇಟಸ್‌ನ ಲವ್ ನೋಡೋದು ಸುಲಭ. ಆದರೆ ರಿಯಾಲಿಟಿಯ ಪ್ರೀತಿ ಧೈರ್ಯ ಕೇಳುತ್ತೆ. ಪತ್ರದ ಮಸಿಯಿಂದ ಮೊಬೈಲ್‌ನ ಬ್ಲೂ ಟಿಕ್‌ವರೆಗೆ ಬಂದ ಈ ಪ್ರಯಾಣದಲ್ಲಿ ಯುವ ಮನಸುಗಳು ಇನ್ನೂ ಒಂದೇ ಹುಡುಕಾಟದಲ್ಲಿವೆ. ನಿಜವಾದ ನಂಬಿಕೆ, ನಿಜವಾದ ಪ್ರೀತಿ. ಕಣ್ಣೀರು ಮತ್ತು ನಗು ಎರಡರ ನಡುವೆ ತಮ್ಮದೇ ಕಥೆ ಬರೆಯುತ್ತಾ ಮುಂದೆ ನಡೆಯುತ್ತಿವೆ.

**– ಸಿಕಂದರ ಎಂ.ಆರಿ.**

---

# ಒಂಬತ್ತು ವರ್ಷಗಳ ನಿರಂತರ ಸೇವೆ: ಪಾದಯಾತ್ರಿಕರಿಗೆ ನೀರು-ಬಿಸ್ಕೆಟ್ ವಿತರಣೆ



**■ ವಿಜಯಸಾಕ್ಷಿ ಸುದ್ದಿ, ಕೊಟ್ಟೂರು**


ಶ್ರೀ ಗುರುಕೊಟ್ಟೂರೇಶ್ವರ ದೇವಸ್ಥಾನದ ಮಹಾ ರಥೋತ್ಸವದ ಅಂಗವಾಗಿ ಪಟ್ಟಣಕ್ಕೆ ಆಗಮಿಸಿದ್ದ ಪಾದಯಾತ್ರಿಕರು ಹಾಗೂ ಭಕ್ತರಿಗೆ ಕೊಟ್ಟೂರು ತಾಲೂಕು ಪತ್ರಕರ್ತ ದಾದಾಪೀರ್ ಅವರ ನೇತೃತ್ವದಲ್ಲಿ ಸೇವಾ ಕಾರ್ಯ ನಡೆಸಲಾಯಿತು.

ಕಳೆದ ಒಂಬತ್ತು ವರ್ಷಗಳಿಂದ ನಿರಂತರವಾಗಿ ಈ ಸೇವೆಯನ್ನು ಸಲ್ಲಿಸುತ್ತಿರುವುದು ವಿಶೇಷವಾಗಿದ್ದು, ರಥೋತ್ಸವದ ಸಂದರ್ಭದಲ್ಲಿ ದಾದಾಪೀರ್ ಅವರ ಕುಟುಂಬ ಸದಸ್ಯರೆಲ್ಲರೂ ಸೇರಿ ಭಕ್ತರಿಗೆ ನೀರಿನ ಬಾಟಲ್ ಹಾಗೂ ಬಿಸ್ಕೆಟ್ ವಿತರಣೆ ಮಾಡಿ ಮಾನವೀಯತೆ ಮೆರೆದರು.

ಬಿಸಿಲಿನ ತಾಪದಲ್ಲೂ ದೂರದೂರಿನಿಂದ ಆಗಮಿಸಿದ ಭಕ್ತರಿಗೆ ಈ ಸೇವೆ ವಿಶೇಷ ನೆರವಾಯಿತು.

ಈ ಸಂದರ್ಭದಲ್ಲಿ ಜಾಫರ್ ಶರೀಫ್, ಮಹಮದ್ ರಫೀಕ್, ಸುಭಾನ್, ಮಹಮದ್ ರಿಜ್ವಾನ್, ದಿಶಾ, ಪೀರ್ ಸಾಬ್, ರಾಜಭಕ್ಷಿ ಸೇರಿದಂತೆ ಕುಟುಂಬ ಸದಸ್ಯರು ಭಾಗವಹಿಸಿ ಸೇವಾ ಕಾರ್ಯದಲ್ಲಿ ಕೈಜೋಡಿಸಿದರು. ಭಕ್ತರ ಅನುಕೂಲಕ್ಕಾಗಿ ನಡೆಯುತ್ತಿರುವ ಈ ಸೇವೆ ಸಮಾಜಕ್ಕೆ ಮಾದರಿಯಾಗಿದ್ದು, ಇದು ಸ್ಥಳೀಯರ ಮೆಚ್ಚುಗೆಗೆ ಪಾತ್ರವಾಗಿದೆ.

## ಭಾವಸಾರ ವ್ಹಿಜನ್ ಇಂಡಿಯಾಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಭಾವಸಾರ ವ್ಹಿಜನ್ ಇಂಡಿಯಾದ ನೂತನ ಅಧ್ಯಕ್ಷರಾಗಿ ಶ್ರೀಪಾದ ವೈಕುಂಠೆ, ಉಪಾಧ್ಯಕ್ಷರಾಗಿ ವೀಣಾ ಸುಲಾಖೆ, ಕಾರ್ಯದರ್ಶಿಯಾಗಿ ಸುಧಾ ಎಸ್.ವೈಕುಂಠೆ, ಜಂಟಿ ಕಾರ್ಯದರ್ಶಿಯಾಗಿ ವೀಣಾ ಕಪಟಕರ, ಖಜಾಂಚಿಯಾಗಿ ನಾಗರಾಜ ವಾರ್ದೋನೆ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ಫೆ. 14ರಂದು ಸಂಜೆ 5.30 ಗಂಟೆಗೆ ಗದುಗಿನ ವಿಠ್ಠಲ ಮಂದಿರದ ಸಭಾಂಗಣದಲ್ಲಿ ಜರುಗಲಿದೆ.

ಭಾವಸಾರ ಕ್ಷತ್ರಿಯ ಸಮಾಜದ ಗಣ್ಯರಾದ ತುಕಾರಾಮ ಬೇಂದ್ರೆ ಕಾರ್ಯಕ್ರಮ ಉದ್ಘಾಟಿಸುವರು. ಭಾವಸಾರ ವ್ಹಿಜನ್ ಇಂಡಿಯಾ 101ರ ಗವರ್ನರ್ ಪ್ರಮೋದ ನವಲೆ ಪದಗ್ರಹಣ ನೆರವೇರಿಸುವರು.

ವ್ಹಿಜನ್ ಗವರ್ನರ್ ಸೆಕ್ರೆಟರಿ ಸಂತೋಷ ಮಿರಜಕರ, ವ್ಹಿಜನ್ ಡೆಪ್ಯೂಟಿ ಗವರ್ನರ್ ಮಹೇಶ ಮಹೇಂದ್ರಕರ, ಅರುಣಕುಮಾರ ಕುಂಠೆ, ಅಶ್ವಥ್ ಸುಲಾಖೆ, ಸಿದ್ದು ಮಾಲದಕರ, ಪ್ರದೀಪ ಗುಜ್ಜರ ಹಾಗೂ ದತ್ತಾತ್ರೇಯ ಚೌದರಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

### ಚಿಂಚನಸೂರು ಕಲ್ಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭ

# ಸ್ವಾರ್ಥಕ್ಕಾಗಿ ಮೌಲ್ಯಗಳನ್ನು ಬಲಿ ಕೊಡಬಾರದು

■ ವಿಜಯಸಾಕ್ಷಿ ಸುದ್ದಿ, ಆಳಂದ

ಬೆಳಗುವ ದೀಪಕ್ಕೆ ಎಣ್ಣೆ ಇದ್ದಂತೆ ಸರ್ವ ಚಟುವಟಿಕೆಗಳಿಗೆ ಆತ್ಮ ವಿಶ್ವಾಸವೇ ಆಧಾರ. ಮನುಷ್ಯ ಸ್ವಾರ್ಥಕ್ಕಾಗಿ ಆದರ್ಶ ಮೌಲ್ಯಗಳನ್ನು ಬಲಿ ಕೊಡಬಾರದು. ಮೌಲ್ಯಾಧಾರಿತ ಚಿಂತನೆಗಳು ಬಾಳಿನ ಭಾಗ್ಯೋದಯಕ್ಕೆ ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಚಿಂಚನಸೂರು ಕಲ್ಮಠ(ಚಿಕ್ಕಮಠ)ದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಅಸತ್ಯದಿಂದ ಸತ್ಯದೆಡೆಗೆ, ಕತ್ತಲೆಯಿಂದ ಬೆಳಕಿನೆಡೆಗೆ, ಸಾವಿನಿಂದ ಸಾವಿಲ್ಲದೆಡೆಗೆ ಮುನ್ನಡೆಯುವ ಗುರಿ ಮನುಷ್ಯನದಾಗಬೇಕು. ಮನುಷ್ಯ ಧರ್ಮದಿಂದ ವಿಮುಖನಾದರೆ ಜೀವನ ಅಶಾಂತಿಯ ಕಡಲಾಗುತ್ತದೆ. ವಿಜ್ಞಾನ ಮತ್ತು ತಂತ್ರಜ್ಞಾನ ಬೆಳೆದಂತೆ ಮನುಷ್ಯನ ಭಾವನೆಗಳು ಬೆಳೆಯಲಾರದಿರುವುದೇ ನೋವಿನ ಸಂಗತಿ. ಶಾಂತಿ, ನೆಮ್ಮದಿಯ ಬದುಕಿಗೆ ಧರ್ಮ ಬೇಕು. ಸಂತೃಪ್ತಿ, ಸಮೃದ್ಧಿಗಾಗಿ ಧರ್ಮಾಚರಣೆ ಬೇಕು.



ಪಟ್ಟಾಧಿಕಾರದ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ತಮ್ಮ ಉತ್ತರಾಧಿಕಾರಿಗಳನ್ನು ನಿಯುಕ್ತಿಗೊಳಿಸಿ ಶ್ರೀ ಗುರು ಪಟ್ಟಾಭಿಷೇಕ ನೆರವೇರಿಸುತ್ತಿರುವುದು ಸಂತೋಷದ ಸಂಗತಿ. ಪಟ್ಟಾಭಿಷಿಕ್ತರಾದ ನೂತನ ಗೌರಿಶಂಕರ ಶಿವಾಚಾರ್ಯ ಸ್ವಾಮಿಗಳು ಅವರ ಆದರ್ಶ ದಾರಿಯಲ್ಲಿ ಮುನ್ನಡೆದು ಧರ್ಮ ಜಾಗೃತಿ ಮತ್ತು ಭಕ್ತರಿಗೆ ಯೋಗ್ಯ ಮಾರ್ಗದರ್ಶನ ನೀಡುವರೆಂಬ ಆತ್ಮ ವಿಶ್ವಾಸ ತಮಗಿದೆ ಎಂದು ಹರುಷ ವ್ಯಕ್ತಪಡಿಸಿದರು. ಉಭಯತರರಿಗೂ ಶ್ರೀ ರಂಭಾಪುರಿ ಪೀಠದಿಂದ ರೇಶ್ಮೆ ಪೀತಾಂಬರ ಸ್ಮರಣಿಕೆ ಫಲ ಪುಷ್ಪವಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಹಿರಿಯ ಪಟ್ಟಾಧ್ಯಕ್ಷರಾದ ಸಿದ್ಧಮಲ್ಲ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಗೊಳ್ಳಲು ಸಾಧ್ಯವಾಗುತ್ತದೆ.

> ಪಟ್ಟಾಭಿಷಿಕ್ತರಾದ ನೂತನ ಗೌರಿಶಂಕರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅಧಿಕಾರದ ಅಂತಸ್ತು ಮೇಲೇರಿದಂತೆ ನೀತಿಯ ಅಂತಸ್ತು ಮೇಲೇರಬೇಕು. ಸತ್ಯ ಮತ್ತು ಶಾಂತಿ ಧರ್ಮದ ಎರಡು ಕಣ್ಣು. ಮನುಷ್ಯನ ಅಂತರಂಗ ಪರಿಶುದ್ಧಗೊಳಿಸುವ ಶಕ್ತಿ ಗುರುವಿಗೆ ಮಾತ್ರ ಇದೆ. ಸಿರಿ ಸಂಪದ ಗಳಿಸಲು ಮನುಷ್ಯನಿಗೆ ಬೇಕಾದಷ್ಟು ಸಮಯವಿದೆ. ಆದರೆ ಆಧ್ಯಾತ್ಮ ಸಾಧನೆಗೆ ಸಮಯ ಇಲ್ಲದಂಥ ಪರಿಸ್ಥಿತಿಯಿದೆ. ಜನರಲ್ಲಿ ಜಾಗೃತಿ ಉಂಟು ಮಾಡುವುದೇ ಗುರುವಿನ ಕರ್ತವ್ಯ ಎಂದರು.

ಯಾವುದೇ ವಿಶ್ವವಿದ್ಯಾಲಯ ಕಲಿಸದೇ ಇರುವ ಜ್ಞಾನವನ್ನು ಜೀವನಾನುಭವ ಕಲಿಸಿಕೊಟ್ಟಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಬಲದಿಂದ ಬಹು ದೊಡ್ಡ ಶಕ್ತಿ ಪ್ರಾಪ್ತವಾಗಿದೆ ಎಂದರು.

ಬಾಣೇಶ್ವರ ಹಿರೇಮಠದ ಗಂಗಾಧರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ವೀರಶೈವ ಧರ್ಮ ಸಂಸ್ಕೃತಿ ಮತ್ತು ಗುರು ಪೀಠಗಳ ಮಹತ್ವ ಕುರಿತು ಮಾತನಾಡಿದರು.

ಪಟ್ಟಾಧಿಕಾರ ಸಮಾರಂಭದ ಎಲ್ಲ ವೈದಿಕ ಕಾರ್ಯಗಳನ್ನು ಸೊಲ್ಲಾಪುರದ ಡಾ. ಶಿವಯೋಗಿಸ್ವಾಮಿ ಹೊಳಿಮಠ ಅವರು ನೆರವೇರಿಸಿದರು. ನೂತನ ಶ್ರೀಗಳಿಗೆ ಸಿದ್ಧಮಲ್ಲ ಶಿವಾಚಾರ್ಯರು ಷಟ್ಸ್ಥಲ ಬ್ರಹ್ಮೋಪದೇಶ ಮಾಡಿ ಗುರುತ್ವಾಧಿಕಾರ ಅನುಗ್ರಹಿಸಿದರು. ನಂತರ ನಡೆದ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ದಂಡ-ಕಮಂಡಲ ಸಮೇತ ಪಂಚ ಮುದ್ರೆ ಅನುಗ್ರಹಿಸಿ ಆಶೀರ್ವದಿಸಿದರು.

ಹಾರಕೂಡ, ಚವುದಾಪುರಿ, ಚಿಣ್ಮಯಗಿರಿ, ಬಬಲಾದ, ತೊನಸನಹಳ್ಳಿ, ಮಳಲಿ, ಸಂಗೊಳ್ಳಿ ಮಠಾಧೀಶರನ್ನು ಮೊದಲ್ಗೊಂಡು ಸುಮಾರು 25ಕ್ಕೂ ಹೆಚ್ಚು ಶ್ರೀಗಳವರು ಉಪಸ್ಥಿತರಿದ್ದರು.

## ಶಿವತತ್ವವು ತ್ಯಾಗ, ಸಮತೆಯ ಪ್ರತೀಕ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಪಂಡಿತ ಪುಟ್ಟರಾಜ ಗವಾಯಿಗಳ ಆಶ್ರಮದಲ್ಲಿ ಗದಗ ಜಿಲ್ಲಾ ರೆಡ್ಡಿ ಮಹಿಳಾ ಸಮಾಜದ ವತಿಯಿಂದ ಮಹಾಶಿವರಾತ್ರಿ ಹಬ್ಬದ ಮಹತ್ವ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಶಿವರಾತ್ರಿಯ ಹಿನ್ನೆಲೆಯನ್ನು ಕುರಿತು ಹಿರಿಯರಾದ ರತ್ನಾ ಸೋಮರೆಡ್ಡಿ ಮಾತನಾಡಿ, ಮಹಾಶಿವರಾತ್ರಿ ಕೇವಲ ಒಂದು ಹಬ್ಬವಲ್ಲ. ಅದು ಆತ್ಮಪರಿಶೀಲನೆ, ಉಪವಾಸ, ಜಾಗರಣೆ ಮತ್ತು ಶಿವನಾಮ ಸ್ಮರಣೆಯ ಮೂಲಕ ಮನಸ್ಸಿನ ಶುದ್ಧೀಕರಣಕ್ಕೆ ದಾರಿ ತೋರುವ ಪವಿತ್ರ ದಿನವಾಗಿದೆ. ಶಿವತತ್ವವು ತ್ಯಾಗ, ಸಮತೆ, ಸಹಿಷ್ಣುತೆ ಮತ್ತು ಶಾಂತಿಯ ಸಂಕೇತವಾಗಿದ್ದು, ಇಂದಿನ ಯುವಪೀಳಿಗೆಗೆ ನೈತಿಕ ದಾರಿದೀಪವಾಗಬಹುದು. ಶಿವರಾತ್ರಿಯ ಉಪವಾಸವು ದೇಹದ ಶುದ್ಧೀಕರಣಕ್ಕೆ ಮಾತ್ರವಲ್ಲ, ಮನೋನಿಗ್ರಹ ಮತ್ತು ಆತ್ಮಸಾಧನೆಗೆ ಸಹಾಯಕವಾಗುತ್ತದೆ ಎಂದರು.

ಆಶ್ರಮದ ಗುರುಗಳು ಶಿವರಾತ್ರಿಯ ಪೌರಾಣಿಕ ಹಿನ್ನೆಲೆ ಮತ್ತು ಅದರ ತಾತ್ವಿಕ ಅರ್ಥವನ್ನು ವಿವರಿಸಿ, ವಿದ್ಯಾರ್ಥಿಗಳಿಗೆ ಭಾರತೀಯ ಸಂಸ್ಕೃತಿಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು. ಕಾರ್ಯಕ್ರಮದ ಅಂಗವಾಗಿ ಭಜನೆ, ಕೀರ್ತನೆ ಮತ್ತು ಶಿವನಾಮ ಸ್ಮರಣೆ ನಡೆಯಿತು.

ಕಾರ್ಯಕ್ರಮದಲ್ಲಿ ರಾಜೇಶ್ವರಿ ಶಿರೋಳ ಶಿವರಾತ್ರಿಯ ವೈಶಿಷ್ಟತೆಯ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ರೂಪಾ ತಿರ್ಲಾಪೂರ ಕಾರ್ಯಕ್ರಮವನ್ನು ನೆರವೇರಿಸಿದರು. ವೀಣಾ ತಿರ್ಲಾಪೂರ ವಂದಿಸಿದರು.

ಕಾರ್ಯಕ್ರಮದಲ್ಲಿ ಯಶೋಧ ಗದ್ದಿಕೇರಿ, ಸುಮಾ ಶಿವನಗೌಡ, ಶೈಲಜಾ ಕವಲೂರ್, ಆಶಾ ಹೋದರ ಗೌಡರ್ ಸೇರಿದಂತೆ ರೆಡ್ಡಿ ಬಳಗದ ಮಹಿಳೆಯರು ಉಪಸ್ಥಿತರಿದ್ದರು.

## ದೇಶದ ಸಂಸ್ಕೃತಿಯ ಉಳಿವಿಗೆ ಮಹಿಳೆಯರೇ ಶಕ್ತಿ



■ ವಿಜಯಸಾಕ್ಷಿ ಸುದ್ದಿ, ಡಂಬಳ

ಮಹಿಳೆಯರಿಂದ ಮಾತ್ರ ಮಕ್ಕಳಲ್ಲಿ ಉತ್ತಮ ಸಂಸ್ಕೃತಿ, ಸಂಸ್ಕಾರ, ವಿನಯತೆ ಬೆಳೆಸಲು ಸಾಧ್ಯ. ಆ ಹಿನ್ನೆಲೆಯಲ್ಲಿ ಮಹಿಳೆಯರು ಮಹಿಳಾ ದಿನಾಚರಣೆಯಲ್ಲಿ ಸಂತೋಷದಿಂದ ಪಾಲ್ಗೊಳ್ಳಿ. ನಮ್ಮ ದೇಶದ ಸಂಸ್ಕೃ ಉಳಿಸಿ ಬೆಳಸೋಣ ಎಂದು ರೋಣದ ಸ್ಪಂದನಾ ಮಹಿಳಾ ಮಂಡಳ ಅಧ್ಯಕ್ಷೆ ಶಶಿಕಲಾ ಸಂಗನಗೌಡ ಪಾಟೀಲ ಕರೆ ನೀಡಿದರು.

ಡಂಬಳ ಗ್ರಾಮದ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಸ್ಪಂದನಾ ಮಹಿಳಾ ಮಂಡಳದ ವತಿಯಿಂದ ಮಾರ್ಚ್ 8ರಂದು ಡಂಬಳ ಗ್ರಾಮದಲ್ಲಿ ಜರಗುವ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಆಯೋಜನೆಯ ನಿಮಿತ್ತ ಕರೆದಿದ್ದ ಪೂರ್ವಭಾವಿ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಮಹಿಳೆಯರಿಗಾಗಿಯೇ ಇರುವ ಗ್ರಾಮೀಣ ಸೊಗಡಿನ, ಐತಿಹಾಸಿಕ ಪರಂಪರೆ ನೆನಪಿಸುವ ಸ್ಪರ್ಧೆಗಳನ್ನು ಆಯೋಜನೆ ಮಾಡಲಾಗುತ್ತದೆ. 18 ವರ್ಷ ಮೇಲ್ಪಟ್ಟ ಸ್ತ್ರೀಯರಿಗೆ ಮಾತ್ರ ಅವಕಾಶವಿರುತ್ತದೆ.

ನಿರ್ಣಾಯಕರ ನಿರ್ಣಯವೇ ಅಂತಿಮವಾಗಿರುತ್ತದೆ ಮತ್ತು ಗ್ರಾಮೀಣ ಭಾಗದಲ್ಲಿ ಆಯ್ಕೆಯಾದ ಮಹಿಳೆಯರಿಗೆ ರೋಣದಲ್ಲಿ ನಡೆಯುವ ತಾಲೂಕಾ ಮಟ್ಟದ ಮಹಿಳಾ ದಿನಾಚರಣೆಯ ಅಂಗವಾಗಿ ಸ್ಪರ್ಧೆ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಡಾ. ಪಂಚಯ್ಯ ಹಿರೇಮಠ, ಹಿರೇಮಠ ಮಾತನಾಡಿದರು. ಕಾರ್ಯಕ್ರಮದ ಸಂಘಟಕರಾದ ಡಾ. ಮಲ್ಲನಗೌಡ ಪಾಟೀಲ, ವಿ.ಜಿ. ದೇಸಾಯಿಗೌಡರ, ಎಮ್. ಆರ್. ಪಾಟೀಲ, ಎಮ್.ವಿ. ಪಾಟೀಲ್, ಎಸ್.ಆರ್. ಪೂಜಾರ, ಭುವನೇಶ್ವರಿ ಕಲ್ಲಿಕುಟಿಗರ, ಜ್ಯೋತಿ ಕುರಿ, ಜಯಮ್ಮ ಯಲಭೋವಿ, ಬಾಳಮ್ಮ ಜೋಂಡಿ, ಮಹಾದೇವಕ್ಕ ಕೋಳ್ಯಾರ, ವಿಶಾಲಾಕ್ಷಿ ಕೊಂತಿಕಲ್ಲ, ಜ್ಯೋತಿ ಬಾವಿ, ನೀಲಮ್ಮ ಗಡಗಿ, ಸುತ್ತಮುತ್ತಲಿನ ಗ್ರಾಮದ ಮಹಿಳೆಯರು ಇದ್ದರು.

## ಬಿ.ಇಡಿ ದಾಖಲಾತಿ ಪರಿಶೀಲನೆ ಪ್ರವೇಶ ಪ್ರಕ್ರಿಯೆ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಎರಡು ವರ್ಷದ ಬಿ.ಇಡಿ ಕೋರ್ಸ್‌ನ 6ನೇ ಸುತ್ತಿನಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಹಂಚಿಕೆಯಾದ ಕಾಲೇಜುಗಳಿಗೆ ಸೇರಲು ಇಚ್ಛಿಸಿದಲ್ಲಿ, ತಮ್ಮ ಯೂಸರ್ ಐಡಿ ಮತ್ತು ಪಾಸ್‌ವರ್ಡ್ ಬಳಸಿ ನಿಗದಿತ ಶುಲ್ಕದ ಚಲನನ್ನು ಮುದ್ರಿಸಿಕೊಂಡು, State Bank of India (ಭಾರತೀಯ ಸ್ಟೇಟ್ ಬ್ಯಾಂಕ್) ಯಾವುದೇ ಶಾಖೆಯಲ್ಲಿ ಶುಲ್ಕ ಪಾವತಿಸಬೇಕು. ಶುಲ್ಕ ಪಾವತಿಸಿದ ಮೂಲ ಚಲನ ಪ್ರತಿಯೊಂದಿಗೆ ಹಾಗೂ ಇತರೆ ಎಲ್ಲಾ ಮೂಲ ದಾಖಲೆಗಳು ಮತ್ತು ಒಂದು ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಕಳಸಾಪುರ ರಸ್ತೆ, ಗದಗ ಇಲ್ಲಿ ಹಾಜರಾಗಿ ಪ್ರವೇಶ ಪತ್ರ ಪಡೆಯುವಂತೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಜಾಲತಾಣ Department of School Education Karnataka - www.schooleducation.kar.nic.in ಸಂಪರ್ಕಿಸಬಹುದು. ಸಂಪರ್ಕಿಸಲು: ಬಿ.ಎಫ್. ಅರಟಗಿ, ನೋಡಲ್ ಅಧಿಕಾರಿ, ಡಯಟ್ ಗದಗ ಮೊಬೈಲ್: 9482176932.

## ಸಾರ್ವಜನಿಕ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿಯಲ್ಲಿ ಮುಖ್ಯ ಮಂತ್ರಿಗಳ ಉಪಸ್ಥಿತಿಯಲ್ಲಿ ನಡೆಯಲಿರುವ ಭೂ ಗ್ಯಾರಂಟಿ ಸಮರ್ಪಣಾ ಸಮಾವೇಶದ ಹಿನ್ನೆಲೆಯಲ್ಲಿ ಸಾರಿಗೆ ವಿಭಾಗದಿಂದ ಪ್ರಾಸಂಗಿಕ ಕರಾರಿನ ಮೇರೆಗೆ 250 ವಾಹನಗಳನ್ನು ಒದಗಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಫೆಬ್ರವರಿ 14ರಂದು ಬಸ್ಸುಗಳ ಕೊರತೆ ಉಂಟಾಗುವ ಸಾಧ್ಯತೆ ಇದ್ದು, ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪ್ರಯಾಣ ಸೌಲಭ್ಯಗಳಲ್ಲಿ ತಾತ್ಕಾಲಿಕ ವ್ಯತ್ಯಯ ಉಂಟಾಗಬಹುದು.

ವಿವಿಧ ಮಾರ್ಗಗಳ ನಿಯಮಿತ ಸಂಚಾರದಲ್ಲಿ ವ್ಯತ್ಯಾಸವಾಗುವ ಸಾಧ್ಯತೆಗಳಿವೆ.

ಆದ್ದರಿಂದ ಇಂದು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು, ಸಾರಿಗೆ ಇಲಾಖೆಗೆ ಸಹಕರಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀ ಪಿ.ವಾಯ್. ಗಡೇದ ಅವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಸಾಹಿತ್ಯ ಸಮ್ಮೇಳನಕ್ಕೆ ಸಜ್ಜಾದ ಯಳವತ್ತಿ

▶▶ ಮೊದಲನೇ ಪುಟದಿಂದ

ಮಕ್ಕಳು ಸೇರಿ 5 ಸಾವಿರಕ್ಕಿಂತ ಹೆಚ್ಚು ಜನರು ಪಾಲ್ಗೊಳ್ಳಲಿದ್ದಾರೆ.

ಕೋಟೆ ಆವರಣದಲ್ಲಿ ಬೃಹತ್ ವೇದಿಕೆ, ಆಸನದ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ ಮಾಡಲಾಗಿದೆ. ಶಾಲಾ ಆವರಣದಲ್ಲಿ ಖಡಕ್ ರೊಟ್ಟಿ, ಚಪಾತಿ, ಕಡ್ಲಿಚಟ್ನಿ, ಗೋದಿಹುಗ್ಗಿ ಭೋಜನದ ವ್ಯವಸ್ಥೆ ಹಾಗೂ ಅಲ್ಲಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಒಟ್ಟಾರೆ ಸಮ್ಮೇಳನವನ್ನು ಯಶಸ್ವಿಯಾಗಿಸುವಲ್ಲಿ ಎಲ್ಲ ಕನ್ನಡದ ಮಸಸ್ಸುಗಳು ಒಂದಾಗಿ ಕಾರ್ಯೋನ್ಮುಖರಾಗಿದ್ದಾರೆ.

## ಜೀತ ಪದ್ಧತಿ ನಿರ್ಮೂಲನೆ ಎಲ್ಲರ ಕರ್ತವ್ಯ

▶▶ ಮೊದಲನೇ ಪುಟದಿಂದ

ಜೀತ ಪದ್ಧತಿಗೆ ಒಳಗಾದವರಿಗೆ ನ್ಯಾಯ ದೊರಕುವ ವ್ಯವಸ್ಥೆ ನಿರ್ಮಾಣವಾಗುತ್ತದೆ. ಈ ರೀತಿ ಉತ್ತಮ ಸಮಾಜವನ್ನು ಕಟ್ಟುವಲ್ಲಿ ಮತ್ತು ಸಮಾಜದ ಕೆಟ್ಟ ಪಿಡುಗುಗಳನ್ನು ನಿರ್ಮೂಲನೆ ಮಾಡುವಲ್ಲಿ ಮಕ್ಕಳು ಹಾಗೂ ಸಮಾಜದ ನಾಗರಿಕರು ಕೈಜೋಡಿಸಬೇಕು ಎಂದು ಹೇಳಿದರು.

ಶಾಲಾ ಮುಖ್ಯೋಪಾಧ್ಯಾಯ ಆರ್.ಎಫ್. ಬಟಗುರ್ಕಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಂ.ಕೆ. ಚವಡಿ 'ಜೀತ ಪದ್ಧತಿ ಅಂದು ಮತ್ತು ಇಂದು' ಕುರಿತು ಉಪನ್ಯಾಸ ನೀಡಿದರು.

ಸಹಾಯಕ ಸರ್ಕಾರಿ ಅಭಿಯೋಜಕಿ ಹೀನಾಕೌಸರ್ ಗಂಜಿಹಾಳ, ವಕೀಲರ ಸಂಘದ ತಾಲೂಕಾಧ್ಯಕ್ಷ ಎಸ್.ವೈ. ಗೊಬ್ಬರಗುಂಪಿ ವೇದಿಕೆಯಲ್ಲಿದ್ದರು.

ಎನ್.ಆರ್. ಉಡಚಗೊಂಡ ಸ್ವಾಗತಿಸಿದರು. ರೇಣುಕಾ ಜಗಂಡಭಾವಿ ನಿರೂಪಿಸಿದರು. ಬಿ.ಕೆ. ಕರಕಣ್ಣವರ ವಂದಿಸಿದರು. ಸುನೀಲ್ ಲಮಾಣಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಇಂದು ಡಾ. ಭೀಮಣ್ಣ ಖಂಡ್ರೆ ಅವರ ನುಡಿ ನಮನ ಕಾರ್ಯಕ್ರಮ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಇತ್ತೀಚೆಗೆ ಲಿಂಗೈಕ್ಯರಾದ ಮಾಜಿ ಸಚಿವರು, ಶತಾಯುಷಿ ಲೋಕನಾಯಕ ಡಾ. ಭೀಮಣ್ಣ ಖಂಡ್ರೆ ಅವರ ಗೌರವಾರ್ಥ ಫೆಬ್ರವರಿ 14ರಂದು (ಶನಿವಾರ) ಸಂಜೆ ಬೆಂಗಳೂರಿನಲ್ಲಿ ನುಡಿನಮನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮತ್ತು ಭಾಲ್ಕಿಯ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ, ಬೆಂಗಳೂರು ಅರಮನೆ ಆವರಣದ ಗೇಟ್ 4ರಲ್ಲಿರುವ ಗಾಯತ್ರಿ ವಿಹಾರದಲ್ಲಿ ಈ ನುಡಿನಮನ ಕಾರ್ಯಕ್ರಮ ನಡೆಯಲಿದೆ.

ಸುತ್ತೂರು ಸಂಸ್ಥಾನದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ತರಳಬಾಳು ಬೃಹನ್ಮಠದ ಡಾ. ಶಿವಮೂರ್ತಿ ಶಿವಾಚಾರ್ಯರು, ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ, ಭಾಲ್ಕಿ ಹಿರೇಮಠದ ಡಾ. ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.

ರಾಜ್ಯಸಭೆಯ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಭಾಧ್ಯಕ್ಷ ಯು.ಟಿ. ಖಾದರ್, ಸಭಾಪತಿ ಬಸವರಾಜ ಹೊರಟ್ಟಿ, ಕೇಂದ್ರ ಸಚಿವ ವಿ.ಸೋಮಣ್ಣ, ಮಾಜಿ ಮುಖ್ಯಮಂತ್ರಿಗಳಾದ ಎಂ. ವೀರಪ್ಪ ಮೊಯ್ಲಿ, ಬಿ.ಎಸ್. ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ಅವರು ನುಡಿನಮನ ಸಲ್ಲಿಸಲಿದ್ದಾರೆ.

ರಾಜ್ಯ ಸಚಿವ ಸಂಪುಟದ ಸಚಿವರುಗಳು, ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಮಹಾಸಭಾದ ರಾಜ್ಯ ಘಟಕಗಳ ವಿವಿಧ ರಾಜ್ಯ ಘಟಕಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಡಾ. ಭೀಮಣ್ಣ ಖಂಡ್ರೆ ಅವರು ಸಭೆಗೆ ಸ್ವಂತ ನಿವೇಶನ ಖರೀದಿಸಿ, ಭವ್ಯ ಕಟ್ಟಡ ನಿರ್ಮಿಸಿ ಸಭಾ ಸ್ವಾವಲಂಬಿಯಾಗುವಂತೆ ಮಾಡಿದ ಮಹತ್ತರ ಕೊಡುಗೆ ಸಮಾಜ ಎಂದಿಗೂ ಮರೆಯುವುದಿಲ್ಲ. ಭಾಲ್ಕಿಯಲ್ಲಿ ನಡೆದ ಶ್ರದ್ಧಾಂಜಲಿ ಸಭೆಯ ಬಳಿಕ ಇದೀಗ ಬೆಂಗಳೂರಿನಲ್ಲಿ ನುಡಿನಮನ ಹಮ್ಮಿಕೊಳ್ಳಲಾಗಿದೆ.




ಲಕ್ಷ್ಮೇಶ್ವರ ಸಮೀಪದ ಒಡೆಯರ ಮಲ್ಲಾಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ, ಸರಸ್ವತಿ ಪೂಜಾ ಕಾರ್ಯಕ್ರಮದಲ್ಲಿ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಭಾರತಮಾತೆಗೆ ದೀಪದಾನ ಪೂಜೆ ನೆರವೇರಿಸಿದರು. ಪ್ರಾಚಾರ್ಯರು, ಶಿಕ್ಷಕವೃಂದ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಕರ್ನಾಟಕ ರಾಜ್ಯ ರೈತ ಸಂಘ ನೇತೃತ್ವದಲ್ಲಿ ಉಪಕೇಂದ್ರ ತ್ವರಿತ ಚಾಲನೆಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ವಿವಿಧ ರೈತರ ಬೇಡಿಕೆಗಳನ್ನು ಈಡೇರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಗೆ ರೈತ ಸಂಘದ ಮುಖಂಡರು ಮನವಿ ಸಲ್ಲಿಸಿದರು.

ತಂಬ್ರಹಳ್ಳಿ ಭಾಗದಲ್ಲಿ ಉಪಕೇಂದ್ರವನ್ನು ಆರಂಭಿಸುವಂತೆ 2024-25ನೇ ಸಾಲಿನಲ್ಲಿ ಹೋರಾಟ ನಡೆಸಲಾಗಿತ್ತು.

2026ರಲ್ಲಿ ನಡೆದ ಹೋರಾಟಕ್ಕೆ ಫಲ ಸಿಕ್ಕಿದ್ದು, ಉಪಕೇಂದ್ರ ಸ್ಥಾಪನೆಗೆ ಅನುಮೋದನೆ ದೊರೆತಿದೆ. ಇದೀಗ ಉಪಕೇಂದ್ರವನ್ನು ತ್ವರಿತವಾಗಿ ಚಾರ್ಜ್ ಮಾಡಿ ಸಾರ್ವಜನಿಕರಿಗೆ ವಿದ್ಯುತ್ ಸರಬರಾಜು ಆರಂಭಿಸಬೇಕೆಂದು ರೈತ ಸಂಘದ ಮುಖಂಡರು ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಜೆ.ಎಂ. ವೀರಸಂಗಯ್ಯ, ತಾಲೂಕು ಅಧ್ಯಕ್ಷ ಹರಟಿ ಕಾಳಪ್ಪ, ಉಪಾಧ್ಯಕ್ಷ ವಿ. ನಾಗೇಂದ್ರಪ್ಪ, ಗೌರವಾಧ್ಯಕ್ಷ ಹಲಗೇರಿ ಮಹೇಶ್, ಪ್ರಧಾನ ಕಾರ್ಯದರ್ಶಿ ರವಿಕುಮಾರ್ (ತಂಬ್ರಹಳ್ಳಿ), ಗಡ್ಡಿ ನಿಂಗಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಗ್ರಾಮದ ಐತಿಹಾಸಿಕ ಶ್ರೀಮಂತಿಕೆಯನ್ನು ಸಾಕ್ಷೀಕರಿಸುವ ದೇವಸ್ಥಾನ, ಕೋಟೆ ಆವರಣ**

# ಇಷ್ಟಾರ್ಥ ಸಿದ್ಧಿಸುವ ಶ್ರೀ ಗುಂಡೇಶ್ವರ ದೇವರು



ನಮ್ಮೂರಿನ ಗುಂಡೇಶ್ವರ ದೇವರ ದೇವಸ್ಥಾನ ಪುರಾತನವಾಗಿದ್ದು, ಇಲ್ಲಿ ಶರೀಫ ಸಾಹೇಬರು ಮತ್ತು ನವಲಗುಂದದ ನಾಗಲಿಂಗಪ್ಪ ಸ್ವಾಮೀಜಿ ಪವಾಡ ಮೆರೆದಿದ್ದಾರೆ. ಈಗಲೂ ಹಾವು ಕಡಿಸಿಕೊಂಡವರು ದೇವಸ್ಥಾನಕ್ಕೆ ಬಂದು ಬಾವಿಯಲ್ಲಿ ಸ್ನಾನ ಮಾಡಿ ದರ್ಶನ ಪಡೆದರೆ ಗುಣಮುಖರಾಗುತ್ತಾರೆ ಎನ್ನುತ್ತಾರೆ ಇಲ್ಲಿನ ಗ್ರಾಮಸ್ಥರು.



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಯಳವತ್ತಿ ಗ್ರಾಮ ಐತಿಹಾಸಿಕ, ಧಾರ್ಮಿಕ, ಕೃಷಿ, ಶಿಕ್ಷಣ ವಿವಿಧ ರಂಗದಲ್ಲಿ ಹೆಸರಾಗಿದೆ. ಇಲ್ಲಿನ ಶ್ರೀ ಗುಂಡೇಶ್ವರ ದೇವಸ್ಥಾನ, ಕೋಟೆ ಆವರಣ ಗ್ರಾಮದ ಐತಿಹಾಸಿಕ ಶ್ರೀಮಂತಿಕೆಯನ್ನು ಸಾಕ್ಷೀಕರಿಸುತ್ತವೆ. ಗ್ರಾಮದ ಜನರ, ಭಕ್ತರ ಇಷ್ಟಾರ್ಥ ಸಿದ್ಧಿಸುವ ಶ್ರೀ ಗುಂಡೇಶ್ವರ ಎಲ್ಲರ ಆರಾಧ್ಯದೈವವಾಗಿದೆ.

ಗುಂಡೇಶ್ವರ ದೇವಸ್ಥಾನ ಅತ್ಯಂತ ಪುರಾತನ ದೇವಸ್ಥಾನ. ಆದರೆ ದೇವಾಲಯಕ್ಕೆ ಸುಣ್ಣ-ಬಣ್ಣ ಬಳಿದಿರುವುದರಿಂದ ಪುರಾತನ ಕಲ್ಲುಗಳು ಮರೆಯಾಗಿವೆ. ಇದು 11ನೇ ಶತಮಾನದಲ್ಲಿ ನಿರ್ಮಿಸಲ್ಪಟ್ಟ ದೇವಸ್ಥಾನ ಎಂಬುದಕ್ಕೆ ಇಲ್ಲಿನ ಶಿಲಾ ಶಾಸನಗಳು ಸಾಕ್ಷಿಯಾಗಿವೆ. ಗುಂಡಲಿಂಗ ದೇವಾಲಯದ ಆವರಣದಲ್ಲಿರುವ ಕ್ರಿ.ಶ. 1152ರ ಶಾಸನದಲ್ಲಿ ಕಲ್ಯಾಣದ ಚಾಲುಕ್ಯರ ತ್ರಿಭುವನಮಲ್ಲದೇವನ ಆಳ್ವಿಕೆಯ ಕಾಲಾವಧಿಯಲ್ಲಿ ಊರುಗಳ ಚರ್ಕವರ್ತಿ ಎನಿಸಿದ ಶ್ರೀರಾಮಸ್ವಾಮಿ ದತ್ತಿಯಾದ ಯಳವತ್ತಿ ಮಹಾ ಅಗ್ರಹಾರದ 120 ಮಹಾಜನರು ತಮ್ಮ ಕುಲದೈವರಾದ ಗುಂಡೇಶ್ವರ ದೇವರ ಪೂಜೆ ಪುನಸ್ಕಾರಗಳಿಗೆ ದೇವರಾಶಿಯತಿಪತಿಯ ಸನ್ನಿಧಿಯಲ್ಲಿ ಭೂದಾನ ಮಾಡಿದ ನಿರೂಪಣೆಯಿದೆ. ಸಾಂಗ್ಲಿ ಸಂಸ್ಥಾನಿಕರು ಆಡಳಿತ ನಡೆಸಿದ ಕ್ಷೇತ್ರವಾಗಿದ್ದು, ಇಲ್ಲಿನ ಬೃಹತ್ ಕಲ್ಲಿನ ಕೋಟೆಯನ್ನು ಪೇಶ್ವೆಯವರ ಕಾಲದಲ್ಲಿ ನಿರ್ಮಿಸಲಾಗಿದೆ.

ಧಾರವಾಡ ಜಿಲ್ಲೆ ಅಣ್ಣಿಗೇರಿಯ ಅಮೃತೇಶ್ವರ, ಯಳವತ್ತಿ ಗ್ರಾಮದ ಗುಂಡೇಶ್ವರ ಮತ್ತು ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನಗಳು ಒಂದೇ ವೇಳೆಗೆ ನಿರ್ಮಿಸಲ್ಪಟ್ಟಿವೆ ಎಂಬ ಐತಿಹ್ಯವೂ ಇದೆ. ಈ ಮೂರೂ ದೇವಸ್ಥಾನಗಳು ಚಾಲುಕ್ಯ ಶಿಲ್ಪಕಲೆ ಹೊಂದಿರುವುದು ಪರಶಿವನೇ ಇಲ್ಲಿನ ಅಧಿದೈವ.

ಒಮ್ಮೆ ಸಂತ ಶಿಶುನಾಳದ ಶರೀಫರು ನವಲಗುಂದದ ನಾಗಲಿಂಗ ಸ್ವಾಮಿಗಳೊಡನೆ ತೆರಳುವ ಸಂದರ್ಭದಲ್ಲಿ ಯಳವತ್ತಿಯ ಗುಂಡೇಶ್ವರ ದೇವಸ್ಥಾನದಲ್ಲಿ ತಂಗುತ್ತಾರೆ. ಈ ಮಹಾತ್ಮರು ತಮ್ಮ ದಿವ್ಯದೃಷ್ಟಿಯಿಂದ ದೇವಸ್ಥಾನದ ಮಹತ್ವ ಅರಿತು ಹಾವು ಕಡಿದವರಾಗಲಿ ಅಥವಾ ವಿಷ ಬಾಧಿತರಾಗಲಿ ದೇವಸ್ಥಾನದ ಹೊಸ್ತಿಲನ್ನು ದಾಟಿಕೊಂಡು ಹೋದರೆ ಅವರು ವಿಷ ಬಾಧೆಯಿಂದ ಪಾರಾಗುತ್ತಾರೆ ಎಂದು ನೆರೆದಿದ್ದ ಭಕ್ತರಿಗೆ ತಿಳಿಸುತ್ತಾರೆ. ಅಂದಿನಿಂದ ಇಂದಿನವರೆಗೆ ಹಾವು ಕಡಿದವರು ಮತ್ತು ವಿಷ ಬಾಧಿತರು ದೇವಸ್ಥಾನದಲ್ಲಿನ ಶಿವಲಿಂಗದ ದರ್ಶನ ಮಾಡಿ ಸಂಕಷ್ಟದಿಂದ ಪಾರಾಗುತ್ತಾರೆ.

ಪ್ರತಿವರ್ಷ ಮೇ ತಿಂಗಳು ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನಮಠದ ಜಾತ್ರೆ ನಡೆದ ಹತ್ತು ದಿನಗಳ ನಂತರ ಗುಂಡೇಶ್ವರ ದೇವರ ಜಾತ್ರೆ ವೈಭವದಿಂದ ನಡೆಯುತ್ತದೆ.

## ಫೆ.20ರಂದು ಸಂತ ಕವಿ ಸರ್ವಜ್ಞರ ಜಯಂತಿ

**■ ವಿಜಯಸಾಕ್ಷಿ ಸುದ್ದಿ, ಗದಗ**




ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಸರ್ವಜ್ಞ ಅವರ ಜಯಂತಿ ಕಾರ್ಯಕ್ರಮವನ್ನು ಫೆಬ್ರವರಿ 20ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಡಾ. ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ. ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ. ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು ಡಿ. ಆರ್. ಪಾಟೀಲ, ನರಗುಂದ ಶಾಸಕ ಸಿ. ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್. ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ. ಬಿ. ಅಸೂಟಿ ಉಪಸ್ಥಿತರಾಗಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ. ಎಂ ಆಗಮಿಸಲಿದ್ದಾರೆ.

ನಿವೃತ್ತ ಉಪನ್ಯಾಸಕರಾದ ಶಿವಾನಂದ ಚಕ್ರಸಾಲಿ ಅವರು ಉಪನ್ಯಾಸ ನೀಡಲಿದ್ದಾರೆ. ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ. ದುರಗೇಶ್ ಕೆ.ಆರ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ಫ್ಹಿ. ಬಳ್ಳಾರಿ ಅವರು ಸಾರ್ವಜನಿಕರನ್ನು ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನಿಸಿದ್ದಾರೆ.

## ಪ್ರಜ್ವಲ್ ರಿತ್ತಿಗೆ ಗೌರವ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕೃಷ್ಣನ ಭಕ್ತನಾದ ತಿಮ್ಮಪ್ಪನು ತಮ್ಮ ಬಾಲ್ಯದಲ್ಲಿ ಹೊಲದಲ್ಲಿ ನೆಲ ಅಗೆಯುತ್ತಿದ್ದಾಗ ಬಂಗಾರ ತುಂಬಿದ ಕೊಡ ದೊರೆತು, ಆ ಬಂಗಾರವನ್ನು ಸ್ವಂತಕ್ಕೆ ಬಳಸಿಕೊಳ್ಳದೆ ಜನರ ಹಿತಕ್ಕಾಗಿ ಬಳಸಿದ ಫಲವಾಗಿ ತಿಮ್ಮಪ್ಪನಿಗೆ ಕನಕದಾಸನೆಂದು ಪ್ರಸಿದ್ಧಿಯಾದಂತೆ ಗ್ರಾಮದ ಬಾಲಕ ಪ್ರಜ್ವಲ್ ತನ್ನ ಮನೆಯ ಪಾಯ ತೆಗೆಯುವಾಗ ದೊರೆತ ಬಂಗಾರದ ನಿಧಿಯನ್ನು ಸರಕಾರಕ್ಕೆ ನೀಡಿ ನಿಸ್ವಾರ್ಥತೆ ಮೆರೆದು ಆಧುನಿಕ ಕನಕನೆನಿಸಿಕೊಂಡಿದ್ದಾನೆ ಎಂದು ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಪ್ರಭಾರಿ ಬೀರಲಿಂಗದೇವರು ಸ್ವಾಮೀಜಿಯವರು ಅಭಿಪ್ರಾಯಪಟ್ಟರು.

ಇಲ್ಲಿಯ ಪ್ರಜ್ವಲ್ ರಿತ್ತಿಯವರ ಮನೆಗೆ ಭೇಟಿ ನೀಡಿ ಪ್ರಜ್ವಲ್‌ನನ್ನು ಸನ್ಮಾನಿಸಿ ಮಾತನಾಡಿದ ಶ್ರೀಗಳು, ಪ್ರಜ್ವಲ್‌ನಂತಹ ವಿದ್ಯಾರ್ಥಿಗಳು ಇಂದಿನ ಸಮಾಜಕ್ಕೆ ಅಗತ್ಯವಾಗಿದ್ದು, ಅವನ ಪ್ರಾಮಾಣಿಕತೆಗೆ ಸರಕಾರ ಸೂಕ್ತವಾಗಿ ಗೌರವಿಸಿ ಅವರ ಬಡತನಕ್ಕೆ ನೆರವಾಗಬೇಕು ಎಂದರು.

ಸತ್ಯಪ್ಪ ಗುರಿಕಾರ, ವನಿತಾ ಗುರಿಕಾರ, ರವಿಚಂದ್ರ ಅಬ್ಬಿಗೇರಿ, ಸಾಹಿತಿ ಬಸವರಾಜ ಗರ್ಜಪ್ಪನವರ, ಮಠದ ವ್ಯವಸ್ಥಾಪಕ ಯಮನೂರಪ್ಪ ಹಾಜರಿದ್ದರು.






**ಹಂಪಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐತಿಹಾಸಿಕ ಹಂಪಿ ಉತ್ಸವವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಹಾಗೂ ಕಾನೂನು ಸಚಿವರಾದ ಎಚ್ ಕೆ ಪಾಟೀಲ್, ಜಿಲ್ಲಾ ಉಸ್ತುವಾರಿ ಸಚಿವರಾದ ಜಮೀರ್ ಅಹ್ಮದ್ ಖಾನ್, ಸಚಿವರುಗಳಾದ ಶಿವರಾಜ್ ತಂಗಡಗಿ, ಬೈರತಿ ಸುರೇಶ್, ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್, ಸಂಸದರಾದ ತುಕರಾಮ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಶಾಸಕರು ಹಾಗೂ ಅನೇಕ ಮುಖಂಡರು ಉಪಸ್ಥಿತರಿದ್ದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಮಾಜಿ ಸಚಿವ ಎಚ್ ಎಮ್ ರೇವಣ್ಣ ಸೇರಿದಂತೆ ಹಲವಾರು ಗಣ್ಯರು ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ಹಂಪಿ ಉತ್ಸವದ ಉದ್ಘಾಟನೆಯೊಂದಿಗೆ ವೈಭವಮಯ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ದೊರಕಿತು.

## ಕೆ.ಎಚ್ ಪಾಟೀಲ್ ಕರಿಯರ್ ಅಕಾಡೆಮಿಯಿಂದ ಫೆ.16ರಿಂದ 'ಉತ್ಕರ್ಷತೆಯೆಡೆಗೆ' ಕಾರ್ಯಕ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**




ಕೆ.ಎಚ್. ಪಾಟೀಲ ಕರಿಯರ್ ಅಕಾಡೆಮಿ ವತಿಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗಾಗಿ ಪರೀಕ್ಷಾಪೂರ್ವ ತರಬೇತಿ ಶಿಬಿರ 'ಉತ್ಕರ್ಷತೆಯೆಡೆಗೆ' ಎಂಬ ವಿದ್ಯಾರ್ಥಿ ಸ್ನೇಹಿ ಕಾರ್ಯಕ್ರಮವನ್ನು ಫೆಬ್ರವರಿ 16ರಿಂದ 20ರವರೆಗೆ ಗದಗ ಪರಿಸರದ ವಿವಿಧ ಸ್ಥಳಗಳಲ್ಲಿ ಆಯೋಜಿಸಲಾಗಿದೆ ಎಂದು ಅಕಾಡೆಮಿಯ ಕೃಷ್ಣಗೌಡ ಎಚ್. ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ವಿದ್ಯಾರ್ಥಿಗಳು ದೃಢಚಿತ್ತದಿಂದ ಮತ್ತು ನಿರ್ಭಯವಾಗಿ ಪರೀಕ್ಷೆಯನ್ನು ಎದುರಿಸಲು ಸನ್ನದ್ಧರಾಗುವಂತೆ ಮಾಡಲು ಅಕಾಡೆಮಿ ನಿರಂತರ ಪ್ರಯತ್ನಿಸುತ್ತಿದೆ ಎಂದು ಹೇಳಿದ್ದಾರೆ.

**ಕಾರ್ಯಕ್ರಮದ ವೇಳಾಪಟ್ಟಿ:** ಫೆ. 16, ಬೆಳಿಗ್ಗೆ 10 ಗಂಟೆ – ಮುಳಗುಂದ ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿಗಳ ಕಲ್ಯಾಣ ಮಂಟಪ, ಫೆ. 16, ಮಧ್ಯಾಹ್ನ 2 ಗಂಟೆ – ಹೊಸಳ್ಳಿ ಗ್ರಾಮದ ಬೂದೀಶ್ವರ ವಿದ್ಯಾಪೀಠ, ಫೆ. 17, ಬೆಳಿಗ್ಗೆ 10 ಗಂಟೆ – ನಾಗಾವಿಯ ಕೆ.ಎಚ್. ಪಾಟೀಲ ಸಭಾಭವನ, ಫೆ. 18, ಬೆಳಿಗ್ಗೆ 10 ಗಂಟೆ – ಗದಗ ನಗರದ ಅಂಬೇಡ್ಕರ್ ಭವನ

ಫೆ. 19, ಬೆಳಿಗ್ಗೆ 10 ಗಂಟೆ – ಗದಗ ಎಪಿಎಂಸಿಯ ಕೆ.ಎಚ್. ಪಾಟೀಲ ಸಭಾಭವನ, ಫೆ. 20, ಬೆಳಿಗ್ಗೆ 10 ಗಂಟೆ – ಬೆಟಗೇರಿಯ ಲೋಯೊಲಾ ಪ್ರೌಢಶಾಲೆ, ಫೆ. 20, ಮಧ್ಯಾಹ್ನ 2 ಗಂಟೆ – ಸೇಂಟ್ ಜಾನ್ಸ್ ಪ್ರೌಢಶಾಲೆ

ನಾಡಿನಾದ್ಯಂತ ಅನೇಕ ತರಬೇತಿ ಶಿಬಿರಗಳನ್ನು ಯಶಸ್ವಿಯಾಗಿ ನಡೆಸಿರುವ ಸಂಪನ್ಮೂಲ ವ್ಯಕ್ತಿ ವಿನಯ ಪಾಟೀಲ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಗದಗ ಹಾಗೂ ಸುತ್ತಮುತ್ತಲಿನ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಪ್ರಯೋಜನ ಪಡೆಯಬೇಕು ಎಂದು ಕೃಷ್ಣಗೌಡ ಎಚ್. ಪಾಟೀಲ ವಿನಂತಿಸಿದ್ದಾರೆ.

**ವೀರಶೈವ ಲಿಂಗಾಯತ ಸಮಾಜ ಸೇವಾ ಸಮಿತಿಯಿಂದ ಜಂಗಮ ವಟುಗಳ ಲಿಂಗದೀಕ್ಷೆ, ಧರ್ಮ ಸಭೆ**

## ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಫೆ.15, 16ಕ್ಕೆ



ಫೆ. 16ರಂದು ವಿವಿಧ ಕ್ಷೇತ್ರದಲ್ಲಿ ಸಾಧನೆಗೈದವರಿಗೆ ಸನ್ಮಾನ ಸಮಾರಂಭ ಹಾಗೂ ಸಾಂಸ್ಕೃತಿಕ ಸಂಗೀತ ಕಾರ್ಯಕ್ರಮ ಸಂಜೆ 4ರಿಂದ ಜರುಗಲಿದೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಸುಕ್ಷೇತ್ರ ಮಣಕವಾಡದ ದೇವ ಮಂದಿರ ಮಹಾಮಠದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು, ಹಿರೇವಡ್ಡಟ್ಟಿಯ ಶ್ರೀ ಷ.ಬ್ರ. ವಿರೇಶ್ವರ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಅಧ್ಯಕ್ಷತೆಯನ್ನು ಮಾಜಿ ಸಚಿವ ಕಳಕಪ್ಪ ಜಿ.ಬಂಡಿ, ನೇತೃತ್ವ ಕೆ.ಸಿ.ಸಿ. ಬ್ಯಾಂಕ್ ಧಾರವಾಡದ ಅಧ್ಯಕ್ಷರಾದ ಶಿವಕುಮಾರಗೌಡ ಎಸ್.ಪಾಟೀಲ ವಹಿಸುವರು.

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಮುಂಡರಗಿ ತಾಲೂಕಿನ ಡಂಬಳ ಗ್ರಾಮದ ಮುಖ್ಯ ಬಜಾರದ ಶ್ರೀ ವೀರಭದ್ರೇಶ್ವರ ದೇವಸ್ಥಾನದ ಸಭಾ ಭವನದಲ್ಲಿ ವೀರಶೈವ ಲಿಂಗಾಯತ ಸಮಾಜ ಸೇವಾ ಸಮಿತಿ ಡಂಬಳ ಇವರ ವತಿಯಿಂದ ಫೆ. 15ರಂದು ಮುಂಜಾನೆ 11 ಗಂಟೆಗೆ ಜಂಗಮ ವಟುಗಳ ಲಿಂಗದೀಕ್ಷಾ ಕಾರ್ಯಕ್ರಮ ಜರುಗಲಿದೆ ಎಂದು ವೇ.ಮೂ ಮಂಜಯ್ಯಸ್ವಾಮಿ ಅರವಟಗಿಮಠ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಧರ್ಮಸಭೆಯ ದಿವ್ಯ ಸಾನ್ನಿಧ್ಯವನ್ನು ಸಂಸ್ಥಾನಮಠ ಮುಂಡರಗಿಯ ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಮಹಾಶಿವಯೋಗಿಗಳು, ಬನ್ನಿಕೊಪ್ಪ-ಮೈಸೂರು ಶ್ರೀ ಷ.ಬ್ರ. ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ, ಹಿರೇವಡ್ಡಟ್ಟಿ ಶ್ರೀ ಷ.ಬ್ರ. ವೀರೇಶ್ವರ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಅಧ್ಯಕ್ಷತೆಯನ್ನು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ, ನೇತೃತ್ವವನ್ನು ಶಿರಹಟ್ಟಿ ಮತಕ್ಷೇತ್ರದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ವಹಿಸುವರು.

ಉದ್ಘಾಟನೆಯನ್ನು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯ ಉಪಾಧ್ಯಕ್ಷ ಮಿಥುನಗೌಡ(ಸಂಗನಗೌಡ) ಜಿ. ಪಾಟೀಲ ನೆರವೇರಿಸುವರು. ಗೌರವ ಉಪಸ್ಥಿತಿ ವೀರಯ್ಯ ಸೋಮನಕಟ್ಟಿಮಠ, ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಅಧ್ಯಕ್ಷ ಸುಭಾಷ ಗುಡಿಮನಿ, ಮುಖ್ಯ ಅತಿಥಿಗಳಾಗಿ ಮಾಜಿ ಸಹಕಾರ ಸಚಿವ ಎಸ್.ಎಸ್. ಪಾಟೀಲ, ಕಾಂಗ್ರೆಸ್ ಪಕ್ಷದ ಮುಖಂಡರಾದ ಆನಂದ ಗಡ್ಡದೇವರಮಠ, ರುದ್ರಾಂಭಾವು ಸ್ವಾಮೀಜಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ತಾಲೂಕು ದಂಡಾಧಿಕಾರಿ ಎರಿಸ್ವಾಮಿ ಪಿ.ಎಸ್, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ, ಉಪ ತಹಸೀಲ್ದಾರ ಸಿ.ಕೆ. ಬೆಳವಟಗಿ, ಎಸ್.ಎಸ್. ಬಿಚ್ಚಾಲಿ, ಕಂದಾಯ ನಿರೀಕ್ಷಕ ಪ್ರಭುಲಿಂಗ ಬಾಗಲಿ, ಗ್ರಾಮಲೆಕ್ಕಾಧಿಕಾರಿ ಯೋಗೀಶ ಕುರಹಟ್ಟಿ, ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ, ಅಭಿವೃದ್ಧಿಅಧಿಕಾರಿ ಪಾರ್ವತಿ ಹೊಂಬಳ, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಪ್ರಾಣೇಶ, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮಹಮ್ಮದರಫೀಕ್ ತಾಂಬೋಟಿ, ಕೃಷಿ ಅಧಿಕಾರಿ ಎಸ್.ಬಿ. ರಾಮೇನಹಳ್ಳಿ, ಲೋಕೋಪಯೋಗಿ ಇಲಾಖೆಯ ಮುಖ್ಯ ಇಂಜಿನಿಯರ್ ಎಚ್. ಬಸವರಾಜ, ಕಾರ್ಯಪಾಲಕ ಅಭಿಯಂತರ ಜಿ.ಆರ್. ಶಿವಮೂರ್ತಿ, ಸಹಾಯಕ ಕಾರ್ಯಪಾಲಕ ಅಭಿಯಂತರ ಎಚ್.ಸಿ. ರಾಘವೇಂದ್ರ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನಾಧಿಕಾರಿ ವಿಶಾಲಾ ಬಿ.ಮಲ್ಲಾಪೂರ ಪಾಲ್ಗೊಳ್ಳಲಿದ್ದಾರೆ.

ಫೆ. 16ರ ಕಾರ್ಯಕ್ರಮದ ಉದ್ಘಾಟನೆಯನ್ನು ನಿವೃತ್ತ ಪೊಲೀಸ್ ಮಹಾನಿರ್ದೇಶಕ ಹಾಗೂ ವಿಶ್ವ ವೀರಶೈವ ಲಿಂಗಾಯತ ಒಕ್ಕೂಟದ ಸಂಸ್ಥಾಪಕ ಅಧ್ಯಕ್ಷ ಜ್ಯೋತಿ ಪ್ರಕಾಶ ಮಿರ್ಜಿ ನೆರವೇರಿಸುವರು. ಮಾಜಿ ಮುಖ್ಯಮಂತ್ರಿ, ಹಾವೇರಿ-ಗದಗ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ, ಚಲನಚಿತ್ರ ನಟರಾದ ಶಿವಕುಮಾರ ಆರಾಧ್ಯ, ಅಕ್ಷಯ ಸೇವಾ ಫೌಂಡೇಶನ್‌ನ ಎಸ್.ಎಸ್. ಹಿರೇಮಠ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ಗದಗ ಜಿ.ಪಂ ಸಾಮಾಜಿಕ ನ್ಯಾಯ ಸಮಿತಿ ಮಾಜಿ ಅಧ್ಯಕ್ಷ ಹೇಮಗಿರೀಶ ಹಾವಿನಾಳ, ಸಾಮಾಜಿಕ ಕಾರ್ಯಕರ್ತ ಮಂಜುನಾಥ ಇಟಗಿ, ಅತಿಥಿಗಳಾಗಿ ಹೇಮಂತಗೌಡ ಪಾಟೀಲ, ವೀರಮಾಹೇಶ್ವರ ಜಂಗಮಾಭಿವೃದ್ಧಿ ಸಂಘದ ಅಧ್ಯಕ್ಷ ಹಾಗೂ ನಿವೃತ್ತ ಶಿಕ್ಷಕರಾದ ವಿ.ಜಿ. ಹಿರೇಮಠ, ನ್ಯಾಯವಾದಿ ಚಿಂದಾನಂದಸ್ವಾಮಿ ದೇವಾಂಗಮಠ, ನ್ಯಾಯವಾದಿ ಶಿವನಗೌಡ ನಾಡಗೌಡ್ರ, ಯುವ ಮುಖಂಡರಾದ ಉಮೇಶ ಅಂಕದ, ನಾಗರಾಜ ಕಾಟ್ರಳ್ಳಿ ಪಾಲಗೊಳ್ಳುವರು.

ಈ ಸಂದರ್ಭದಲ್ಲಿ ಹಿರಿಯರಾದ ವೇ.ಮೂ. ಮುತ್ತಯ್ಯಸ್ವಾಮಿ ಹಿರೇಮಠ, ಮಹೇಶ ಗಡಗಿ, ಸಿದ್ದಣ್ಣ ನಂಜಪ್ಪನವರ, ಸಿದ್ದಲಿಂಗಯ್ಯಸ್ವಾಮಿ ಸ್ಥಾವರಮಠ, ಮಲ್ಲಿಕಾರ್ಜುನ ಪ್ಯಾಟಿ, ಮುತ್ತಣ್ಣ ಕೊಂತಿಕೊಲ್ಲ, ಅಶೋಕ ಹಡಪದ, ದೇವಪ್ಪ ಕೊತಂಬ್ರಿ, ನಾಗರಾಜ ಕಾಟ್ರಳ್ಳಿ, ಬಸವರಾಜ ಗಂಗಾವತಿ, ಉಮೇಶ ಬೆಲ್ಲದ, ದೇವಪ್ಪ ಹಡಪದ, ವಿರೂಪಾಕ್ಷಪ್ಪ ರೇವಡಿ, ಗವಿಶಿದ್ದಪ್ಪ ಹಳ್ಳಾಕಾರ, ನಾಗಪ್ಪ ಜವಳತೋಟದ, ಸಂಗಮೇಶ ಬುಗಟಿ ಮುಂತಾದವರಿದ್ದರು.

## ರೈತರ ಗಮನಕ್ಕೆ – "ಕಿಸಾನ್ ಟ್ರಾಕ್ಟರ್" ನಕಲಿ ಜಾಹೀರಾತು ಬಗ್ಗೆ ಎಚ್ಚರಿಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಫೇಸ್‌ಬುಕ್, ಇನ್‌ಸ್ಟಾಗ್ರಾಮ್, ಯೂಟ್ಯೂಬ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ "ಕಿಸಾನ್ ಟ್ರಾಕ್ಟರ್" ಯೋಜನೆಯಡಿ ರೈತರಿಗೆ ಶೇಕಡಾ 50% ಸಬ್ಸಿಡಿ ನೀಡಲಾಗುತ್ತದೆ ಎಂಬ ನಕಲಿ ಜಾಹೀರಾತು ಹರಿದಾಡುತ್ತಿದೆ.

ಕೃಷಿ ಇಲಾಖೆಯ ಹೆಸರಿನಲ್ಲಿ ಪ್ರಸಾರವಾಗುತ್ತಿರುವ "ಕಿಸಾನ್ ಟ್ರಾಕ್ಟರ್"ಗೆ ಸಂಬಂಧಿಸಿದ ವಿಡಿಯೋಗಳು, ಜಾಹೀರಾತುಗಳು ಹಾಗೂ ಪ್ರಕಟಣೆಗಳು ಸಂಪೂರ್ಣ ಸುಳ್ಳಾಗಿವೆ.

ಸರ್ಕಾರದ ಅಧಿಕೃತ ವೆಬ್‌ಸೈಟ್‌ಗಳಂತೆಯೇ ಕಾಣುವ ನಕಲಿ ಲಿಂಕ್‌ಗಳನ್ನು ಸೃಷ್ಟಿಸಿ, ರೈತರಿಂದ ವೈಯಕ್ತಿಕ ಮಾಹಿತಿ ಮತ್ತು ಹಣ ಪಡೆಯಲು ಕೆಲ ದುರುದ್ದೇಶಿತರು ಪ್ರಯತ್ನಿಸುತ್ತಿದ್ದಾರೆ.

ಅರ್ಜಿ ಸಲ್ಲಿಕೆ ಅಥವಾ ನೋಂದಣಿ ಶುಲ್ಕದ ಹೆಸರಿನಲ್ಲಿ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗೆ ಹಣ ಪಾವತಿಸಬಾರದು. ಅನುಮಾನಾಸ್ಪದ ಂಕಪಿ ಲಿಂಕ್‌ಗಳನ್ನು ಕ್ಲಿಕ್ ಮಾಡಬಾರದು. ಇಂತಹ ನಕಲಿ ಜಾಹೀರಾತುಗಳ ಬಗ್ಗೆ ಎಚ್ಚರ ವಹಿಸಬೇಕು.

ಈ ಕುರಿತು ಪ್ರಕಟಣೆ ನೀಡಿರುವ ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ಅವರು ರೈತರಿಗೆ ಜಾಗ್ರತೆ ವಹಿಸುವಂತೆ ಮನವಿ ಮಾಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka